ವಿಜಯಪುರ | ಸಂಪುಟ 04 | ಸಂಚಿಕೆ 121 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com

RNI NO: KARKAN/2023/86203

ಶುಕ್ರವಾರ, ಜುಲೈ, 03, 2026



"ಫ.ಗು.ಹಳಕಟ್ಟಿಯವರು ವಿಜಯಪುರ ಮೂಲದವರಲ್ಲದಿದ್ದರೂ, ವಿಜಯಪುರದ ಅಭಿವೃದ್ಧಿಗೆ ಹಲವಾರು ಕಾರ್ಯಗಳನ್ನು 100 ವರ್ಷಗಳ ಹಿಂದೆಯೇ ಮಾಡಿದ್ದಾರೆ. ಅವರ ಕಾಳಜಿಯನ್ನು ಬಿ.ಎಲ್.ಡಿ.ಇ ಸಂಸ್ಥೆ ಮತ್ತು ಸಚಿವ ಎಂ.ಬಿ.ಪಾಟೀಲರು ಮುಂದುವರೆಸಿದ್ದಾರೆ."

■ ಡಾ.ಮಹಾಂತೇಶ ಬಿರಾದಾರ
ಕೈಗಾರಿಕೆ ಸಚಿವ ಎಂ.ಬಿ.ಪಾಟೀಲ ಅವರ ಸಾರ್ವಜನಿಕ ಸಂಪರ್ಕಾಧಿಕಾರಿ

### ವಿಜಯಪುರದಲ್ಲಿ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿದ ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ ಅಭಿಮತ

## ವಚನ ಸಾಹಿತ್ಯ ಸಂರಕ್ಷಣೆಗೆ ಡಾ.ಹಳಕಟ್ಟಿ ಕೊಡುಗೆ ಅಪಾರ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 12ನೇ ಶತಮಾನದ ಶರಣರ ವಚನ ಸಾಹಿತ್ಯವನ್ನು ಸಂಗ್ರಹಿಸಿ, ಸಂರಕ್ಷಿಸಿ ಮನುಕುಲಕ್ಕೆ ತಲುಪಿಸಿದ ಮಹಾನ್ ದಾರ್ಶನಿಕ ಡಾ. ಫ.ಗು. ಹಳಕಟ್ಟಿ ಅವರ ಸೇವೆ ಕನ್ನಡ ಸಾಹಿತ್ಯ ಲೋಕಕ್ಕೆ ಅನನ್ಯ ಕೊಡುಗೆಯಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ ಹೇಳಿದರು.



ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಗುರುವಾರ ಡಾ. ಫ.ಗು. ಹಳಕಟ್ಟಿ ಅವರ ಜನ್ಮದಿನದ ಅಂಗವಾಗಿ ಹಮ್ಮಿಕೊಂಡಿದ್ದ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಚನಗಳು ಕೇವಲ ಸಾಹಿತ್ಯವಲ್ಲ, ಬದುಕಿನ ಮೌಲ್ಯಗಳನ್ನು ಬೋಧಿಸುವ ಅಮೂಲ್ಯ ಸಂದೇಶಗಳಾಗಿವೆ. ಅವು ವಿವಿಧ ಭಾಷೆಗಳಿಗೆ ಭಾಷಾಂತರಗೊಂಡು ಜಗತ್ತಿನಾದ್ಯಂತ ಪಸರಿಸಬೇಕು. ವಚನ ಸಾಹಿತ್ಯವನ್ನು ಸಂಗ್ರಹಿಸಿ ಮುಂದಿನ ಪೀಳಿಗೆಗೆ ಉಳಿಸಿಕೊಟ್ಟ ಡಾ. ಫ.ಗು. ಹಳಕಟ್ಟಿಅವರಸಾಧನೆಯುವಜನರಿಗೆಪ್ರೇರಣೆಯಾಗಬೇಕು. ವಿದ್ಯಾರ್ಥಿಗಳು ಇಂತಹ ಮಹನೀಯರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಉಪನ್ಯಾಸ ನೀಡಿದ: ಡಾ. ವಿ.ಡಿ.ಐಹೊಳ್ಳಿ ಅವರು ಡಾ. ಫ.ಗು. ಹಳಕಟ್ಟಿ ಅವರ ಜೀವನ, ಸಾಹಿತ್ಯ ಸೇವೆ ಹಾಗೂ ವಚನ ಸಾಹಿತ್ಯ ಸಂರಕ್ಷಣೆಗೆ ಅವರು ನೀಡಿದ ಅಮೂಲ್ಯ ಕೊಡುಗೆ ಹಾಗೂ ಶರಣರ ವಚನಗಳನ್ನು ಸಂಗ್ರಹಿಸಿ, ಸಂರಕ್ಷಿಸಿ ಮುಂದಿನ ಪೀಳಿಗೆಗೆ ತಲುಪಿಸಿದ ಡಾ. ಫ.ಗು. ಹಳಕಟ್ಟಿ ಅವರ ಸೇವೆ ಕನ್ನಡ ಸಾಹಿತ್ಯದ ಇತಿಹಾಸದಲ್ಲಿ ಅಜರಾಮರವಾಗಿದೆ ಎಂದು ಹೇಳಿದರು.

ವಿಜಯಪುರ ನಗರಸಭೆಯ ಅಧ್ಯಕ್ಷರಾಗಿದ್ದ ಅವಧಿಯಲ್ಲಿ ಹೆಣ್ಣುಮಕ್ಕಳ ಶಿಕ್ಷಣಕ್ಕೆ ವಿಶೇಷ ಒತ್ತು ನೀಡಿದ ಅವರು, ನಗರದ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕಾಗಿ ಸರ್ ಎಂ. ವಿಶ್ವೇಶ್ವರಯ್ಯ ಅವರ ಮಾರ್ಗದರ್ಶನದಲ್ಲಿ ಭೂತನಾಳ ಕೆರೆ ನಿರ್ಮಾಣಕ್ಕೆ ಶ್ರಮಿಸಿದರು ಎಂದು ತಿಳಿಸಿದರು.

ಸಮಾಜ ಮುಖಂಡ ಬಿ.ಎನ್. ನೂಲವಿ ಅವರು ಮಾತನಾಡಿ, ಡಾ. ಫ.ಗು. ಹಳಕಟ್ಟಿ ಅವರ ಜೀವನ ಚರಿತ್ರೆ ಹಾಗೂ ವಚನ ಸಂರಕ್ಷಣೆ ಕುರಿತು ಶಾಲಾ-ಕಾಲೇಜುಗಳ ಪಠ್ಯ ಪುಸ್ತಕದಲ್ಲಿ ಸೇರಿಸಲು ಮನವಿ ಮಾಡಿಕೊಂಡರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆಯುಷ್ ಇಲಾಖೆ ಅಧಿಕಾರಿ ವಿದ್ಯಾವತಿ ಅಥಣಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಂತೋಷ ಭೋವಿ, ಅಡಿವೆಪ್ಪ ಸಾಲಗಲ್, ಭೀಮರಾಯ ಜಿಗಜಿಣಗಿ, ಸೋಮನಗೌಡ ಕಲ್ಲೂರು, ವಿದ್ಯಾವತಿ ಅಂಕಲಗಿ, ಡಾ. ಎಮ್.ಆರ್.ಗುರಿಕರ, ಅಶೋಕ ಅಂಕದ, ಸಂಗಮೇಶ ಮೇತ್ರಿ ಹಾಗೂ ಕೆ.ಎಮ್.ಅಂಕಲಗಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.



### ಪಿಯು ಉಪನ್ಯಾಸಕರನ್ನು ಪ್ರೌಢಶಾಲೆಗಳಿಗೆ ನಿಯೋಜಿಸುವ ನಿಯಮ ವಿರೋಧಿಸಿ ಪಪೂ ಕಾಲೇಜ್ ಉಪನ್ಯಾಸಕರ ಸಂಘ ಸಚಿವರಿಗೆ ಮನವಿ

## ರಾಜ್ಯ ಸರ್ಕಾರದ ಕರಡು ನಿಯಮಕ್ಕೆ ಉಪನ್ಯಾಸಕರ ತೀವ್ರ ವಿರೋಧ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಪ್ರೌಢಶಾಲೆಗಳ 9 ಮತ್ತು 10ನೇ ತರಗತಿಗಳಿಗೆ ಪದವಿಪೂರ್ವ ಕಾಲೇಜು ಉಪನ್ಯಾಸಕರನ್ನು ನಿಯೋಜಿಸಲು ರಾಜ್ಯ ಸರ್ಕಾರ ಹೊರಡಿಸಿರುವ ಕರಡು ನಿಯಮಕ್ಕೆ ಕರ್ನಾಟಕ ರಾಜ್ಯ ಪದವಿಪೂರ್ವ ಕಾಲೇಜು ಉಪನ್ಯಾಸಕರ ಸಂಘ (ರಿ) ವಿಜಯಪುರ ಜಿಲ್ಲಾ ಘಟಕ ತೀವ್ರ ವಿರೋಧ ವ್ಯಕ್ತಪಡಿಸಿದೆ.

ಈ ಸಂಬಂಧ ಸಂಘವು ಸಿದ್ಧಪಡಿಸಿರುವ 20 ಪುಟಗಳ ಸವಿಸ್ತಾರ ಆಕ್ಷೇಪಣಾ ಮನವಿಯನ್ನು ಜಿಲ್ಲೆಯ ಹಿರಿಯ ಮುಖಂಡರು ಹಾಗೂ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರಾದ ಎಂ .ಬಿ .ಪಾಟೀಲ್ ಅವರಿಗೆ ಸಲ್ಲಿಸಿ, ಸರ್ಕಾರದ ಮಟ್ಟದಲ್ಲಿ ತಕ್ಷಣ ಮಧ್ಯಪ್ರವೇಶಿಸಿ ಕರಡು ಅಧಿಸೂಚನೆಯನ್ನು ಹಿಂಪಡೆಯುವಂತೆ ಮನವಿ ಮಾಡಿದೆ.

ಸಂಘದ ಪದಾಧಿಕಾರಿಗಳ ಪ್ರಕಾರ, ಪಿಯು ಉಪನ್ಯಾಸಕರನ್ನು ಪ್ರೌಢಶಾಲೆಗಳಿಗೆ ನಿಯೋಜಿಸುವುದರಿಂದ ಪದವಿಪೂರ್ವ ಶಿಕ್ಷಣದ ಗುಣಮಟ್ಟಕ್ಕೆ ಧಕ್ಕೆಯಾಗಲಿದ್ದು, ರಾಷ್ಟ್ರೀಯ ಶಿಕ್ಷಣ ನೀತಿ (ಓಇಕ-2020) ಆಶಯಕ್ಕೂ ವಿರುದ್ಧವಾಗಲಿದೆ. ಜೊತೆಗೆ ನೀಟ್ , ಜೆಇಇ ಹಾಗೂ ಸಿಇಟಿ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ವಿದ್ಯಾರ್ಥಿಗಳಿಗೆ ಅಗತ್ಯವಾದ ವಿಶೇಷ ತರಬೇತಿ ಮತ್ತು ಮಾರ್ಗದರ್ಶನ ನೀಡಲು ಉಪನ್ಯಾಸಕರಿಗೆ ಸಮಯದ ಕೊರತೆಯಾಗುತ್ತದೆ. ಇದರಿಂದ ಗ್ರಾಮೀಣ ಹಾಗೂ ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯದ ಮೇಲೆ ಪ್ರತಿಕೂಲ ಪರಿಣಾಮ ಬೀಳಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಇದಲ್ಲದೆ, ಗೆಜೆಟೆಡ್ ಗ್ರೂಪ್-ಬಿ ವೃಂದದ ಉಪನ್ಯಾಸಕರನ್ನು ಅವರ ಮೂಲ ಸೇವಾ ನಿಯಮಗಳಿಗೆ ವಿರುದ್ಧವಾಗಿ ಪ್ರೌಢಶಾಲೆಗಳಿಗೆ ನಿಯೋಜಿಸುವುದು ವೃತ್ತಿಪರ ಘನತೆ ಹಾಗೂ ಕಾನೂನುಬದ್ಧ ಸೇವಾ ಹಕ್ಕುಗಳ ಉಲ್ಲಂಘನೆಯಾಗಿದೆ ಎಂದು ಸಂಘ ಅಭಿಪ್ರಾಯಪಟ್ಟಿದೆ.

ಪ್ರೌಢಶಾಲೆಗಳಲ್ಲಿ ಶಿಕ್ಷಕರ ಕೊರತೆಯಿದ್ದರೆ ಹೊಸ ಶಿಕ್ಷಕರ ನೇಮಕಾತಿ ಪ್ರಕ್ರಿಯೆಯನ್ನು ತ್ವರಿತವಾಗಿ ಆರಂಭಿಸಬೇಕು. ಬದಲಾಗಿ ಪಿಯು ಉಪನ್ಯಾಸಕರನ್ನು ನಿಯೋಜಿಸುವ ನಿರ್ಧಾರವನ್ನು ಸರ್ಕಾರ ಕೈಬಿಡಬೇಕು ಎಂದು ಸಂಘ ಒತ್ತಾಯಿಸಿದೆ.

ಸಚಿವ ಎಂ .ಬಿ .ಪಾಟೀಲ್ ಅವರು ಈ ವಿಷಯವನ್ನು ಮುಖ್ಯಮಂತ್ರಿ ಹಾಗೂ ಶಿಕ್ಷಣ ಸಚಿವರ ಗಮನಕ್ಕೆ ತಂದು ಕರಡು ಅಧಿಸೂಚನೆಯನ್ನು ಹಿಂಪಡೆಯಲು ಕ್ರಮ ಕೈಗೊಳ್ಳುವಂತೆ ಮನವಿ ಸಲ್ಲಿಸಲಾಗಿದೆ. ಬೇಡಿಕೆಗಳನ್ನು ಸರ್ಕಾರ ಪರಿಗಣಿಸದಿದ್ದರೆ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸುವುದಾಗಿ ವಿಜಯಪುರ ಜಿಲ್ಲಾ ಘಟಕ ಎಚ್ಚರಿಕೆ ನೀಡಿದೆ.

## ಸಬ್ ರಿಜಿಸ್ಟ್ರಾರ್ ಕಚೇರಿ ಮೇಲೆ ಭ್ರಷ್ಟಾಚಾರ ನಿಗ್ರಹ ದಳ ದಿಢೀರ್ ದಾಳಿ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ಲೋಕಾಯುಕ್ತ ಅಧಿಕಾರಿಗಳ ಭ್ರಷ್ಟಾಚಾರ ನಿಗ್ರಹ ದಳವು ಇಂಡಿ ನಗರದ ಉಪನೋಂದಣಾಧಿಕಾರಿ (ಸಬ್ ರಿಜಿಸ್ಟ್ರಾರ್) ಮತ್ತು ವಿವಾಹ ನೋಂದಣಾಧಿಕಾರಿಗಳ ಕಚೇರಿಯ ಮೇಲೆ ಬುಧವಾರ ದಿಢೀರ್ ದಾಳಿ ನಡೆಸಿ, ಅಕ್ರಮವಾಗಿ ಇಟ್ಟುಕೊಂಡಿದ್ದ 50,000 ರೂಪಾಯಿಗಳಿಗೂ ಅಧಿಕ ನಗದು ಹಾಗೂ ಕಚೇರಿಗೆ ಸಂಬಂಧಿಸದ 5 ಜನರನ್ನು ವಶಕ್ಕೆ ಪಡೆದುಕೊಂಡು ವಿಚಾರಣೆ ನಡೆಸುತ್ತಿದ್ದಾರೆ.



ಕಚೇರಿಯಲ್ಲಿದ್ದ 50,000 ರೂ. ಗಿಂತಲೂ ಹೆಚ್ಚಿನ ನಗದನ್ನು ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ. ದಾಳಿಯ ವೇಳೆ ಕಚೇರಿಯಲ್ಲಿದ್ದ ಬಾಂಡ್ ರೈಟರ್ಸ್ ಹಾಗೂ ಏಜೆಂಟರಾಗಿ ಕೆಲಸ ಮಾಡುತ್ತಿದ್ದ ಖಾಸಗಿ ವ್ಯಕ್ತಿಗಳು ಸಿಕ್ಕಿಬಿದ್ದಿದ್ದಾರೆ.

ಪರಿಶೀಲನೆ: ಕಚೇರಿಯಲ್ಲಿದ್ದ ಪ್ರಮುಖ ಕಡತಗಳು (ಫೈಲ್ಸ್) ಹಾಗೂ ಏಜೆಂಟ್‌ಗಳ ವ್ಯವಹಾರಗಳ ದಾಖಲೆಗಳನ್ನು ಅಧಿಕಾರಿಗಳು ತೀವ್ರ ಪರಿಶೀಲನೆಗೆ ಒಳಪಡಿಸಿದ್ದಾರೆ. ಕಾರ್ಯಾಚರಣೆ ನಡೆಸಿದ ತಂಡಲೋಕಾಯುಕ್ತ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಈ ಭ್ರಷ್ಟಾಚಾರ ವಿರೋಧಿ ಜಂಟಿ ದಾಳಿಯನ್ನು ನಡೆಸಲಾಗಿದೆ:

ಲೋಕಾಯುಕ್ತ ಎಸ್.ಪಿ ಟಿ. ಮಲ್ಲೇಶಿ, ಡಿವೈಎಸ್‌ಪಿ ಮಲ್ಲಿಕಾರ್ಜುನ ತುಳಸಿಗೇರಿ, ಸಿಪಿಐ ಆನಂದ ಠಕ್ಕಣ್ಣನವರ, ಆನಂದ ಡೋಣಿ, ಸಾರ್ವಜನಿಕರಿಂದ ಬಂದ ದೂರುಗಳು ಹಾಗೂ ಕಚೇರಿಯಲ್ಲಿ ನಡೆಯುತ್ತಿದ್ದ ಲಂಚಾವತಾರದ ಖಚಿತ ಮಾಹಿತಿ ಆಧರಿಸಿ ಈ ದಾಳಿ ನಡೆಸಲಾಗಿದ್ದು, ಸದ್ಯ ಕಚೇರಿಯಲ್ಲಿ ತನಿಖೆ ಮುಂದುವರೆದಿದ್ದು ತನಿಖೆ ಮುಗಿದ ನಂತರ ಮಾಹಿತಿ ನೀಡುವುದಾಗಿ ಎಸ್.ಪಿ ಟಿ. ಮಲ್ಲೇಶಿ ತಿಳಿಸಿದ್ದಾರೆ.

## ರಾಮನಗರ ಕಲ್ಲುಗಣಿ ದುರಂತ: ಬಂಡೆ ಕುಸಿದು 7 ಕರ್ಮಿಕರ ದರ್ಮರಣ

ರಾಮನಗರ: ಬೆಂಗಳೂರು ದಕ್ಷಿಣ ಜಿಲ್ಲೆಯ ಸಮೀಪದ ಕಲ್ಲುಗಣಿಯಲ್ಲಿ ಸಂಭವಿಸಿದ ಭೀಕರ ಅಪಘಾತದಲ್ಲಿ ಏಳು ಕರ್ಮಿಕರು ಮೃತಪಟ್ಟಿದ್ದಾರೆ. ಇಂದು ಬೆಳಗ್ಗೆ ಕಾವೇರಿ ಕಂಪನಿಯ ಕಲ್ಲುಗಣಿಯಲ್ಲಿ ಕರ್ಮಿಕರು ಕೆಲಸ ನರ್ವಹಿಸುತ್ತಿದ್ದ ವೇಳೆ ಈ ದರ್ಘಟನೆ ನಡೆದಿದೆ. ಗಣಿಯ ಮೇಲ್ಭಾಗದಲ್ಲಿ ಕ್ರೇನ್ ಹಾಗೂ ಹಿಟಾಚಿ ಯಂತ್ರ ಕರ್ಯನರ್ವಹಿಸುತ್ತಿದ್ದಾಗ, ಏಕಾಏಕಿ ದೊಡ್ಡ ಬಂಡೆ ಕಲ್ಲು ಕೆಳಗೆ ಬಿದ್ದ ಪರಿಣಾಮ ಏಳು ಮಂದಿ ಕರ್ಮಿಕರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಮೃತರನ್ನು ಯಾದಗಿರಿ ಜಿಲ್ಲೆಯ ಶಹಾಪುರ್ ತಾಲೂಕು ನಡಿಯಾಳ್ ಗ್ರಾಮದ ರಾಮನಾಯ್ಕ್ (46) ಚತ್ತೀಸ್‌ಗಡ್‌ದ ರ್ಮೇಶ್ ಸಿಂಗ್ (28), ಮಧ್ಯಪ್ರದೇಶದವರಾದ ಸತ್ಯನಾರಾಯಣ ಗೌಂಡ್ (32), ರಾಮ್ ಅವತಾರ್ ಸಿಂಗ್ (32), ಭುವನೇಶ್ವರ್ ಸಿಂಗ್ (37), ರಾಜೇಶ್ ಪ್ರಸಾದ್ (28) ಮತ್ತು ಶಿವರಾಜ್ ಸಿಂಗ್ (26) ಮೃತರು. ಮೃತರ ಏಳು ಕರ್ಮಿಕರ ಪೈಕಿ ಐದು ಜನ ಮಧ್ಯಪ್ರದೇಶದವರಿದ್ದಾರೆ. ಚೋಟು, ಗುಲಾಬ್ ಸಿಂಗ್, ಆನಂದ್, ನೋಹರ್ ಸಿಂಗ್ ಗಾಯಗೊಂಡವರಾಗಿದ್ದು, ಇನ್ನರ್ವರು ಐಸಿಯುನಲ್ಲಿದ್ದು ಚಿಕಿತ್ಸೆ ಮುಂದುವರಿದಿದೆ. ಪೊಲೀಸರ ಭೇಟಿ, ಪ್ರಕರಣ ದಾಖಲು: ಘಟನೆ ನಡೆದ ತಕ್ಷಣ ತಾವರೆಕೆರೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿಸಿದ್ದಾರೆ.



## ನದಿಗೆ ಬಿದ್ದ ಟಿಪ್ಪರ್ ಮೇಲಕ್ಕೆತ್ತುವ ಕಾರ್ಯಾಚರಣೆ ವಿಫಲ

■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಸೇತುವೆ ತಡೆಗೋಡೆ ಮುರಿದು ಕೃಷ್ಣಾ ನದಿಗೆ ಬಿದ್ದ ಟಿಪ್ಪರ್ ವಾಹನವನ್ನು ಮೇಲಕ್ಕೆತ್ತುವ ಕಾರ್ಯಾಚರಣೆ ವಿಫಲವಾಗಿದೆ.

ಬೃಹತ್ ಗಾತ್ರದ ಎರಡು ಕ್ರೇನ್‌ಗಳನ್ನು ಬಳಸಿ ಟಿಪ್ಪರ್ ಅನ್ನು ಮೇಲಕ್ಕೆತ್ತಲು ಪ್ರಯತ್ನಿಸಿದರೂ, ಗಾಳಿಯ ರಭಸದಿಂದ ವಾಹನಕ್ಕೆ ಸಮತೋಲನ ಸಿಗದೆ ಕಾರ್ಯಾಚರಣೆ ಕಷ್ಟಸಾಧ್ಯವಾಗಿದೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.

ಕೊಲ್ಹಾರ ಹಾಗೂ ಬೀಳಗಿ ಪೊಲೀಸ್ ಠಾಣೆಗಳ ಅಧಿಕಾರಿಗಳು, ಸಿಬ್ಬಂದಿ ಮತ್ತು ಅಗ್ನಿಶಾಮಕ ಸಿಬ್ಬಂದಿಗಳು ಹಾಗೂ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಅಧಿಕಾರಿಗಳ ಸಮ್ಮುಖದಲ್ಲಿ ರಕ್ಷಣಾ ಕಾರ್ಯ ನಡೆಯಿತು. ಇದರಿಂದ ರಾಷ್ಟ್ರೀಯ ಹೆದ್ದಾರಿಯಲ್ಲಿ ಸುಮಾರು ನಾಲ್ಕು ಗಂಟೆಗಳ ಕಾಲ ಭಾರೀ ಟ್ರಾಫಿಕ್ ಸಮಸ್ಯೆ ಉಂಟಾಗಿ, ಪ್ರಯಾಣಿಕರು ಹಾಗೂ ವಾಹನ ಚಾಲಕರು ಸಂಕಷ್ಟ ಅನುಭವಿಸಿದರು. ಪರ್ಯಾಯ ಮಾರ್ಗದ ಬಗ್ಗೆ ಮುಂಚಿತ ಮಾಹಿತಿ ನೀಡದಿರುವುದು ಸಾರ್ವಜನಿಕರಲ್ಲಿ ಅಸಮಾಧಾನಕ್ಕೆ ಕಾರಣವಾಯಿತು.

ಟಿಪ್ಪರ್ ಜೊತೆ ನದಿಗೆ ಬಿದ್ದ ಚಾಲಕನ ಸ್ಥಿತಿ ಇನ್ನೂ ತಿಳಿದುಬಂದಿಲ್ಲ.

### ಬಿ.ಎಲ್.ಡಿ.ಇ ಸಂಸ್ಥೆ, ಅಕ್ಷಯಕಲ್ಪ ಮತ್ತು ಕೃಷಿಕಲ್ಪ ಸಹಯೋಗದ ಕ್ಷೀರ ಯೋಜನೆಯ ಸಂಶೋಧನೆ ಮತ್ತು ಅಭಿವೃದ್ಧಿ ಕೇಂದ್ರಕ್ಕೆ ಚಾಲನೆ ನೀಡಿದ ಸಿದ್ಧಲಿಂಗ ಶ್ರೀ ಅಭಿಮತ

# ವಚನ ಸಾಹಿತ್ಯ ನಮಗೆ ಸಿಗಲು ಹಳಕಟ್ಟಿಯವರ ಪಾತ್ರ ದೊಡ್ಡದು

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಸಮಾಜದಲ್ಲಿ ಇಂದು ನಾವು ಅಭಿವೃದ್ಧಿ, ಶಿಕ್ಷಣ ಮತ್ತು ಎಲ್ಲ ಸವಲತ್ತುಗಳನ್ನು ಅನುಭವಿಸುತ್ತಿರುವದು ವಚನಪಿತಾಮಹ ಡಾ.ಫ.ಗು. ಹಳಕಟ್ಟಿಯವರ ತ್ಯಾಗ ಮತ್ತು ಶ್ರಮದಿಂದ ಬಂದಿದ್ದಾಗಿದೆ. ಅಂತಹ ಹಳಕಟ್ಟಿಯವರನ್ನು ಸದಾ ಸ್ಮರಿಸುತ್ತಿರುವ ಬಿ.ಎಲ್.ಡಿ.ಇ ಕಾರ್ಯ ಅನುಪಮವಾದುದು ಎಂದು ನಿಡೋಣಿ ವಿರಕ್ತ ಮಠದ ಪ.ಪೂ ಸಿದ್ಧಲಿಂಗ ಶ್ರೀಗಳು ಹೇಳಿದರು.

ಬಬಲೇಶ್ವರ ತಾಲೂಕಿನ ನಿಡೋಣಿ ಗ್ರಾಮದ ದಾಶ್ಯಾಳ ರಸ್ತೆಯ ವಿರಕ್ತ ಮಠಕ್ಕೆ ಸೇರಿದ 11 ಎಕರೆ ಜಮೀನಿನಲ್ಲಿ ವಚನಪಿತಾಮಹ ಡಾಫ.ಗು.ಹಳಕಟ್ಟಿ ಅವರ ಜನ್ಮದಿನದಂದು ಬಿ.ಎಲ್.ಡಿ.ಇ ಸಂಸ್ಥೆ, ಅಕ್ಷಯಕಲ್ಪ ಮತ್ತು ಕೃಷಿಕಲ್ಪ ಸಹಯೋಗದಲ್ಲಿ ಕೈಗೊಂಡಿರುವ ಕ್ಷೀರ ಯೋಜನೆಯ ಸಂಶೋಧನೆ ಮತ್ತು ಅಭಿವೃದ್ಧಿ ಕೇಂದ್ರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಧಾರವಾಡದಿಂದ ಬಂದ ಹಳಕಟ್ಟಿ ಅವರು ವಿಜಯಪುರದಲ್ಲಿ ಅದ್ಭುತ ಕಾರ್ಯ ಮಾಡಿದ್ದಾರೆ. ಅವರ ನಂತರದ ತಲೆಮಾರುಗಳು ಕೂಡ ಅವರನ್ನು ಸ್ಮರಿಸುವ ಕಾರ್ಯಕ್ಕೆ ಮುಂದಾಗಿರುವುದು ನನಗೆ ಅತೀವ ಸಂತಸ ತಂದಿದೆ. ಇಂದು ಬಸವಾದಿ ಶರಣರ ವಚನ ಸಾಹಿತ್ಯ ನಮಗೆ ಸಿಗಲು ಹಳಕಟ್ಟಿಯವರ ಪಾತ್ರ ದೊಡ್ಡದು. ಅಂತಹ ಹಳಕಟ್ಟಿ ಅವರನ್ನು ಜನಮಾನಸದಲ್ಲಿ ಶಾಶ್ವತವಾಗಿರಿಸಿದವರು ಬಿ.ಎಲ್.ಡಿ.ಇ ಸಂಸ್ಥೆಯವರು ಎಂದರು.

ಹಸುಗಳಿಗೆ ಕೇವಲ ಮೇವು ಹಾಕಿದರೆ ಮಾತ್ರ ಚೆನ್ನಾಗಿ ಹಾಲು ನೀಡುತ್ತದೆ ಎಂಬ ಪರಿಕಲ್ಪನೆಯಲ್ಲಿ ರೈತರು ಇದ್ದರು. ಒಂದು ಬಾರಿ ಒಂದು ಲೀಟರ್ ಹಾಲು ನೀಡುವ ಹಸು ಏಕೆ ಎರಡು ಲೀಟರ್ ಹಾಲು ನೀಡಲು ಸಾಧ್ಯವಿಲ್ಲ? ಎಂಬ ಆಲೋಚನೆ ರೈತರಲ್ಲಿ ಇನ್ನುವರೆಗೂ ಬಂದಿರಲಿಲ್ಲ. ಇದನ್ನ ಪತ್ತೆ ಹಚ್ಚಿ ಮೊಟ್ಟಮೊದಲು ಹಸುವಿಗೆ ವೈಜ್ಞಾನಿಕ ಕೊಟ್ಟಿಗೆ ನಿರ್ಮಾಣ ಮಾಡುವುದು, ಆರೋಗ್ಯ, ಸ್ವಚ್ಛತೆ ಹಾಗೂ ಗುಣಮಟ್ಟದ ಹಾಲಿನ ಉತ್ಪಾದನೆಗೆ ಪೂರಕ ವ್ಯವಸ್ಥೆ ಕಲ್ಪಿಸುವುದರಿಂದ ಹಸು ನಮಗೆ ಹೆಚ್ಚಿನ ಪ್ರಮಾಣದಲ್ಲಿ ಹಾಲು ಒದಗಿಸಲು ಸಾಧ್ಯ ಎಂದು ಸಾಬೀತು ಪಡಿಸಿದ್ದ, ಅಕ್ಷಯಕಲ್ಪ ಹಾಗೂ ಕೃಷಿಕಲ್ಪ ಫೌಂಡೇಶನ್ ಇವರ ಸಹಕಾರದಲ್ಲಿ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಸಹಯೋಗದಲ್ಲಿ ಕ್ಷೀರ ಯೋಜನೆಯನ್ನು ಜಾರಿಗೆ ತಂದಿದ್ದಾರೆ. ರೈತರ ಬಗ್ಗೆ ಕಾಳಜಿಯಿಂದ ಸರ್ಕಾರಿಂದ ರೈತರ ಜಮೀನುಗಳಿಗೆ ನೀರು ಒದಗಿಸಿ, ನಂತರ ಸಂಸ್ಥೆಯ ಮೂಲಕ ಹೈನುಗಾರಿಕೆಗೂ ಉತ್ತೇಜನ ನೀಡುತ್ತಿರುವ ಸಚಿವ ಎಂ.ಬಿ.ಪಾಟೀಲರಿಗೆ ಅಭಿನಂದಿಸಿದರು.



ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯ ಕುಲಾಧಿಪತಿ ಬಸನಗೌಡ ಎಂ.ಪಾಟೀಲ ಮಾತನಾಡಿ, ಮಹಾನಗರಗಳಲ್ಲಿರುವ ದೊಡ್ಡ ದೊಡ್ಡ ಕಂಪನಿಗಳಲ್ಲಿ ಲಕ್ಷಾಂತರ ರೂಪಾಯಿ ಸಂಬಳ ಪಡೆಯುತ್ತಿರುವ ಸಾಲಿನಲ್ಲಿ ರೈತರು ಹೈನುಗಾರಿಕೆಯಿಂದ ಮೇಲೆ ಬರಬೇಕು ಎಂಬ ಉದ್ದೇಶದಿಂದ ಕ್ಷೀರ ಯೋಜನೆಯನ್ನು ಬಬಲೇಶ್ವರ ಹಾಗೂ ತಿಕೋಟಾ ತಾಲೂಕಿನಲ್ಲಿ ಪ್ರಾಯೋಗಿಕವಾಗಿ ಚಾಲನೆ ನೀಡಲಾಗಿದೆ. ಈ ಯೋಜನೆ ಪ್ರಾರಂಭವಾದ ನಂತರ ರೈತರ ಮೊಗದಲ್ಲಿ ಸಂತಸ ವ್ಯಕ್ತವಾಗಿದೆ. ಈ ಮಾದರಿಯನ್ನು ಎಲ್ಲರೂ ಅಳವಡಿಸಿಕೊಂಡರೆ ರೈತರು ಆರ್ಥಿಕವಾಗಿ ಸಬಲರಾಗುತ್ತಾರೆ. ನಿಡೋಣಿಯಲ್ಲಿ ಪ್ರಾಯೋಗಿಕವಾಗಿ ತೋಟದಲ್ಲಿ ವಚನಪಿತಾಮಹ ಡಾ.ಫ.ಗು.ಹಳಕಟ್ಟಿಯವರ ಜನ್ಮದಿನದ ಶುಭ ಸಂದರ್ಭಲ್ಲಿ ಚಾಲನೆ ನೀಡುತ್ತಿರುವುದು ಸಂತಸ ತಂದಿದೆ ಎಂದರು.

ಅಕ್ಷಯಕಲ್ಪ ಫೌಂಡೇಶನ ಸಿ.ಎಂ.ಪಾಟೀಲ ಮಾತನಾಡಿ, ಯುವರೈತರಿಗೆ ಹಸುಗಳ ಆರೈಕೆಗೆ ಅಗತ್ಯ ತಿಳಿವಳಿಕೆ ಇಲ್ಲದೆ ಹೋದಾಗ ಅವರ ಆದಾಯದಲ್ಲಿ ಕುಂಠಿತವಾಗುತ್ತದೆ. ಅದಕ್ಕಾಗಿ ಮೊದಲು ಹಸುಗಳ ಕೊಟ್ಟಿಗೆ, ಆಹಾರ ಪದ್ಧತಿಗಳನ್ನು ಅನುಸರಿಸುವದ ಮೂಲಕ ಹೈನುಗಾರಿಕೆಯಲ್ಲಿ ಉತ್ತಮ ಫಲಿತಾಂಶ ಪಡೆಯಬಹುದಾಗಿದೆ. ಈ ಮಾದರಿ ಕಾರ್ಯವನ್ನು ಆಯ್ದ ಗ್ರಾಮಗಳನ್ನು ತೆಗೆದುಕೊಳ್ಳಲಾಗಿದೆ. ಮುಂದಿನ ದಿನಗಳಲ್ಲಿ ಹೆಚ್ಚಿನ ಗ್ರಾಮಗಳಿಗೆ ವಿಸ್ತರಿಸಲಾಗುವುದು ಎಂದರು.

ರೈತಮುಖಂಡ, ಕೆ.ಎಂ.ಎಫ್ ಮಾಜಿ ನಿರ್ದೇಶಕ ಶ್ರೀಶೈಲಗೌಡ ಪಾಟೀಲ ಮಾತನಾಡಿ, ತಿಪಟೂರಿನಲ್ಲಿರುವ ಅಕ್ಷಯಕಲ್ಪ ಫಾರ್ಮ್ ಗೆ ತರಬೇತಿ ಕೇಂದ್ರಕ್ಕೆ ಭೇಟಿ ನೀಡಿ, ಅಲ್ಲಿನ ಹೈನುಗಾರಿಕೆ ಪದ್ಧತಿ ಬಗ್ಗೆ ಅರಿತಾಗ ನಾವು ಮಾಡಿದ ತಪ್ಪುಗಳನ್ನು ನಾವು ಕಾಣುತ್ತೇವೆ. ಇವುಗಳನ್ನು ಸರಿ ಪಡಿಸಿಕೊಂಡರೆ ಮಾತ್ರ ನಮ್ಮ ರೈತರಿಗೂ ಹೆಚ್ಚಿನ ಆದಾಯ ಬರುತ್ತದೆ ಎಂದರು.



"ವಚನ ಪಿತಾಮಹ ಫ.ಗು.ಹಳಕಟ್ಟಿಯವರು ವಿಜಯಪುರ ಮೂಲದವರಲ್ಲದಿದ್ದರೂ, ವಿಜಯಪುರದ ಅಭಿವೃದ್ಧಿಗೆ ಹಲವಾರು ಕಾರ್ಯಗಳನ್ನು 100 ವರ್ಷಗಳ ಹಿಂದೆಯೆ ಮಾಡಿದ್ದಾರೆ. ಅವರ ಕಾಳಜಿಯನ್ನು ಮುಂದುವರೆಸಿಕೊಂಡು ಹೋಗುವ ಕಾರ್ಯವನ್ನು ಬಿ.ಎಲ್.ಡಿ.ಇ ಸಂಸ್ಥೆ ಮತ್ತು ಸಚಿವ ಎಂ.ಬಿ.ಪಾಟೀಲರು ಮಾಡುತ್ತಿದ್ದಾರೆ."

■ ಡಾ.ಮಹಾಂತೇಶ ಬಿರಾದಾರ
ಕೈಗಾರಿಕೆ ಸಚಿವ ಎಂ.ಬಿ.ಪಾಟೀಲ ಅವರ ಸಾರ್ವಜನಿಕ ಸಂಪರ್ಕಾಧಿಕಾರಿ

ಕೈಗಾರಿಕೆ ಸಚಿವರ ಸಾರ್ವಜನಿಕ ಸಂಪರ್ಕಾಧಿಕಾರಿ ಡಾ.ಮಹಾಂತೇಶ ಬಿರಾದಾರ ಮಾತನಾಡಿ, ಅಕ್ಷಯಕಲ್ಪ, ಹೈನುಗಾರಿಕೆಗೆ ಪ್ರಸಿದ್ದಿಯಾಗಿದ್ದು, ತಿಪಟೂರಿನ ರೈತರು ಇದರ ಸದುಪಯೋಗ ಪಡೆಸಿಕೊಂಡು ಆರ್ಥಕವಾಗಿ ಸಬಲರಾಗಿದ್ದಾರೆ. ಇದರಂತೆ ಇಲ್ಲಿನ ರೈತರು ಸದೃಢರಾಗಬೇಕು ಎಂದು ಹೈನೋದ್ಯಮ ಪ್ರಾರಂಭಿಸಲು ಅಗತ್ಯ ನೆರವು ಪಡೆದು, ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯ ಸಹಭಾಗಿತ್ವದಲ್ಲಿ ತರಬೇತಿ ನೀಡಿ ನೀಡಿ, ರೈತರ ಆರ್ಥಿಕತೆಯನ್ನು ಹೆಚ್ಚಿಸುವ ಕ್ಷೀರ ಪೈಲೆಟ್ ಯೋಜನೆಗೆ ಉತ್ತಮ ಪ್ರತಿಕ್ರಿಯೆ ಬಂದಿದ್ದು, ಯೋಜನೆಗೆ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ವತಿಯಿಂದ ಪ್ರತಿವರ್ಷ ರೂ.50ಲಕ್ಷ ವೆಚ್ಚವನ್ನು ನೀಡುತ್ತಿದೆ. ಈ ಸಂದರ್ಭದಲ್ಲಿ ಪೈಲಟ್ ಯೋಜನೆ ಸಿಬ್ಬಂದಿಗಳಾದ ಈರಣ್ಣ ರೊಟ್ಟಿ, ಸಂತೋಷ ಬಿರಾದಾರ, ರಾಜಕುಮಾರ ಕುಮತೆ, ಶಾನು ಸಾರವಾಡಾ, ಜಬ್ಬಾರ ಇನಾಮದಾರ, ಪ್ರಭುಲಿಂಗ ಬಿರಾದಾರ, ಶಿವಪುತ್ರ ಕೊಲಕಾರ, ಶರಣು ರೆಬಿನಾಳ ಅವರನ್ನು ಸನ್ಮಾನಿಸಿದರು. ಗ್ರಾಮಸ್ಥರಾದ ಮಲ್ಲಿಕಾರ್ಜುನ ಬಾಗಿ, ಶಶಿಧರ ಕೋಟ್ಯಾಳ, ಬಸನಗೌಡ ಬಿರಾದಾರ, ಸೋಮಶೇಖರ ಕೋಟ್ಯಾಳ, ಸಾಹೇಬಗೌಡ ಪಾಟೀಲ, ದಾನಮ್ಮ ಜಿರ್ಲಿ, ಮಹಾದೇವ ಬೆನಕಟ್ಟಿ, ಜಾಪರ ಇನಾಮದಾರ ಸೇರಿದಂತೆ ಉಪಸ್ಥಿತರಿದ್ದರು. ತಿಕೋಟಾ ನ್ಯೂ ಆರ್ಟ್ಸ್ ಕಾಲೇಜಿನ ಹಾಗೂ ಬಬಲೇಶ್ವರ ಶ್ರೀ ಶಾಂತವೀರ ಆರ್ಟ್ಸ್ ಕಾಲೇಜಿನ ಎನ್.ಎಸ್.ಎಸ್ ವಿದ್ಯಾರ್ಥಿಗಳು ಫರ್ಮ್ ನಲ್ಲಿ ಸಸಿಗಳನ್ನು ನೆಟ್ಟರು.

# ಪ್ರೀತಿಯ ಹೆಸರಿನ ಸಾವಿನ ನೆರಳು

## ಭಾವರಶ್ಮಿ

■ ಉದಯರಶ್ಮಿ ದಿನಪತ್ರಿಕೆ

ಪ್ರೀತಿ ಎಂದರೆ ಒಬ್ಬರ ಬದುಕಿಗೆ ಬೆಳಕಾಗಬೇಕಾದ ಭಾವನೆ. ಆದರೆ ಇತ್ತೀಚಿನ ಕೆಲವು ಘಟನೆಗಳು ಉದಾಹರಣೆಗೆ ಪುಣೆಯ ಲೋಹಗಡದಲ್ಲಿ ಕೇತನ್ ಪ್ರಕರಣವಾಗಲಿ, ಉತ್ತರ ಭಾರತದ ರಾಜಾ ರಘುವಂಶಿಸೋನಂ ಪ್ರಕರಣವಾಗಲಿ, ಆ ಬೆಳಕನ್ನೇ ಕತ್ತಲೆಯಾಗಿ ಮಾರ್ಪಡಿಸಿವೆ. ಪ್ರೀತಿಯ ಹೆಸರಿನಲ್ಲಿ ಕೈ ಹಿಡಿದವರು, ಮದುವೆಯ ಕನಸು ತೋರಿಸಿದವರು, ಕೊನೆಗೆ ಅದೇ ನಂಬಿಕೆಯನ್ನು ಆಯುಧವನ್ನಾಗಿ ಬಳಸಿದ್ದಾರೆ ಎಂಬ ಆರೋಪಗಳಿರುವ ಪ್ರಕರಣಗಳು ಸಮಾಜವನ್ನು ತೀವ್ರವಾಗಿ ನೋಯಿಸಿವೆ. ಇಂತಹ ಪ್ರಕರಣಗಳಲ್ಲಿ ನ್ಯಾಯಾಲಯದ ಅಂತಿಮ ತೀರ್ಪು ಬರುವವರೆಗೆ ಆರೋಪಗಳನ್ನು ಸತ್ಯವೆಂದು ಪರಿಗಣಿಸಲಾಗುವುದಿಲ್ಲ. ಆದರೂ ಅವು ಸಂಬಂಧಗಳಲ್ಲಿ ನಂಬಿಕೆ, ಪ್ರಾಮಾಣಿಕತೆ ಮತ್ತು ಸುರಕ್ಷತೆ ಬಗ್ಗೆ ಗಂಭೀರ ಪ್ರಶ್ನೆಗಳನ್ನು ಎಬ್ಬಿಸುತ್ತವೆ.

ಒಬ್ಬ ವ್ಯಕ್ತಿ ತನ್ನ ಹೃದಯವನ್ನು ಯಾರಿಗಾದರೂ ಸಂಪೂರ್ಣವಾಗಿ ಪ್ರೀತಿಯಲ್ಲಿ ಮಾತ್ರ ಒಪ್ಪಿಸುತ್ತಾನೆ. ತನ್ನ ಕನಸುಗಳನ್ನು, ತನ್ನ ಭವಿಷ್ಯವನ್ನು, ತನ್ನ ನಾಳೆಯನ್ನು ಆ ವ್ಯಕ್ತಿಯ ಕೈಗೆ ಕೊಡುತ್ತಾನೆ. ಆದರೆ ಅದೇ ಕೈಗಳು ಮೋಸದ ಬಲೆಯಾಗಿದ್ದರೆ, ಸಾಯುವುದು ಕೇವಲ ಒಂದು ದೇಹವಲ್ಲ, ಒಂದು ತಾಯಿಯ ನಗು, ಒಬ್ಬ ತಂದೆಯ ಹೆಮ್ಮೆ, ಒಂದು ಮನೆಯ ಭವಿಷ್ಯ ಮತ್ತು ಪ್ರೀತಿಯ ಮೇಲಿನ ಮತ್ತೊಂದು ನಂಬಿಕೆಯೂ ಸಾಯುತ್ತದೆ.

ಸಂಬಂಧದಲ್ಲಿ ಮೋಸ ನಡೆದರೆ ಮತ್ತೆ ಬದುಕಬಹುದು. ಪ್ರೀತಿ ಕೈತಪ್ಪಿದರೆ ಮತ್ತೆ ಪ್ರೀತಿಸಬಹುದು. ಆದರೆ ಜೀವ ಕಳೆದುಹೋದರೆ ಅದನ್ನು ಮರಳಿ ಪಡೆಯಲು ಸಾಧ್ಯವಿಲ್ಲ. ಆದ್ದರಿಂದ ಪ್ರೀತಿಯ ಹೆಸ–ರಿನಲ್ಲಿ ನಡೆಯುವ ಯಾವುದೇ ಹಿಂಸೆ ಅಥವಾ ಅಪರಾಧವು ಕೇವಲ ಒಬ್ಬ ವ್ಯಕ್ತಿಯ ವಿರುದ್ಧದ ದ್ರೋಹವಲ್ಲ ಅದು ಮಾನವೀಯತೆಯ ವಿರುದ್ಧದ ದ್ರೋಹ.



ಈ ಘಟನೆಗಳನ್ನು ಆಧಾರವಾಗಿ ತೆಗೆದುಕೊಂಡು ಎಲ್ಲ ಮಹಿಳೆಯರನ್ನಾಗಲಿ ಅಥವಾ ಎಲ್ಲ ಪುರುಷರನ್ನಾಗಲಿ ಒಂದೇ ರೀತಿಯಲ್ಲಿ ನೋಡುವುದು ತಪ್ಪು. ಪ್ರೀತಿ ಮಾಡುವವರು ಬಹುಮಂದಿ ಪ್ರಾಮಾಣಿಕರು. ಆದರೆ ಕೆಲವರ ಕ್ರೂರ ಕೃತ್ಯಗಳು ಆ ಪವಿತ್ರ ಭಾವನೆಗೆ ಕಳಂಕ ತರುತ್ತವೆ. ಅಪರಾಧಕ್ಕೆ ಲಿಂಗವಿಲ್ಲ, ಅಪರಾಧಿಗೆ ಮಾತ್ರ ಹೊಣೆಗಾರಿಕೆ ಇದೆ.

ಇಂದು ಪ್ರೀತಿಸುವ ಪ್ರತಿಯೊಬ್ಬ ಯುವಕ ಮತ್ತು ಯುವತಿ ನೆನಪಿಡಬೇಕಾದ ಒಂದು ಸತ್ಯವಿದೆ. ನಿಜವಾದ ಪ್ರೀತಿ ಜೀವವನ್ನು ಕಾಪಾಡುತ್ತದೆ. ಸ್ವಾತಂತ್ರ್ಯವನ್ನು ಗೌರವಿಸುತ್ತದೆ. ನಂಬಿಕೆಯನ್ನು ಬೆಳೆಸುತ್ತದೆ. ಮೋಸ, ಬೆದರಿಕೆ, ಸ್ವಾರ್ಥ ಅಥವಾ ಹಿಂಸೆಗೆ ಪ್ರೀತಿಯೆಂಬ ಹೆಸರು ಕೊಡಲಾಗುವುದಿಲ್ಲ.

ಒಬ್ಬ ಮಗ ಮನೆಗೆ ಮರಳಿ ಬಾರದಾಗ ಅವನ ಕೊಠಡಿಯ ಮೌನವೇ ತಾಯಿಯ ಕಣ್ಣೀರಿನ ಭಾಷೆಯಾಗುತ್ತದೆ. ತಂದೆಯ ನಿರೀಕ್ಷೆ ಶೂನ್ಯವಾಗುತ್ತದೆ. ಕುಟುಂಬದ ಪ್ರತಿಯೊಂದು ಹಬ್ಬವೂ ಒಂದು



ನೋವಿನ ನೆನಪಾಗುತ್ತದೆ. ಇಂತಹ ನಷ್ಟವನ್ನು ಯಾವ ಶಿಕ್ಷೆಯೂ



ಸಂಪೂರ್ಣವಾಗಿ ಸರಿಪಡಿಸಲಾರದು.

ಪ್ರೀತಿ ಒಂದು ಪವಿತ್ರ ಪದ. ಅದನ್ನು ಮುಖವಾಡವನ್ನಾಗಿ ಮಾಡಿಕೊಂಡು ಯಾರ ಜೀವವನ್ನೂ ಕಸಿದುಕೊಳ್ಳಬಾರದು. ಪ್ರೀತಿಯ ಹೆಸರಿನಲ್ಲಿ ಜೀವ ನಾಶವಾಗುವ ಸಮಾಜವಲ್ಲ, ಜೀವ ಅರಳುವ ಸಮಾಜವನ್ನು ಕಟ್ಟುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಪ್ರೀತಿ ಎಂದಿಗೂ ಸಮಾಧಿಯ ದಾರಿಯಾಗಬಾರದು. ಅದು ಬದುಕಿನ ದಾ–ರಿಯಾಗಬೇಕು.

ಲೇಖನ
– ಡಾ. ರಾಜಶೇಖರ ನಾಗೂರ
ಸಂಚಾಲಕರು
ನಮ್ಮ ಕಥಾ ಅರಮನೆ



# ಕಾನಿಪ ಸಂಘದ ವಿವಿಧ ಸ್ಥಾನಗಳಿಗೆ ಹಿರಿಯ ಪತ್ರಕರ್ತರ ಆಯ್ಕೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕಾರ್ಯನಿರತ ಪತ್ರಕರ್ತರ ಸಂಘದ ವಿಜಯಪುರ ಜಿಲ್ಲಾ ಘಟಕದ ವಿವಿಧ ಸ್ಥಾನಗಳಿಗೆ ಹಿರಿಯ ಪತ್ರಕರ್ತರನ್ನು ನಾಮನಿರ್ದೇಶನ ಮಾಡಿ ಆದೇಶ ಹೊರಡಿಸಲಾಗಿದೆ.

ನಗರದ ಪತ್ರಿಕಾ ಭವನದಲ್ಲಿ ಜಿಲ್ಲಾಧ್ಯಕ್ಷ ಅಶೋಕ ಯಡಳ್ಳಿ ಅವರ ಅಧ್ಯಕ್ಷತೆಯಲ್ಲಿ ನಡೆದ ಜಿಲ್ಲಾ ಪದಾಧಿಕಾರಿಗಳ ಸಭೆಯಲ್ಲಿ ಕೆಳಕಂಡ ಸ್ಥಾನಗಳಿಗೆ ಆಯ್ಕೆ ಪ್ರಕ್ರಿಯೆ ನಡೆಯಿತು.

ರಾಷ್ಟ್ರೀಯ ಮಂಡಳಿ ಸದಸ್ಯರಾಗಿ ಹಿರಿಯ ಪತ್ರಕರ್ತ ಶರಣಬಸಪ್ಪ ಮಸಳಿ ಜಿಲ್ಲಾ ಸಂಘಟನಾ ಕಾರ್ಯದರ್ಶಿಗಳಾಗಿ ಹಿರಿಯ ಪತ್ರಕರ್ತರಾದ ಮೋಹನ ಕುಲಕರ್ಣಿ, ಕೆ.ಕೆ.ಕುಲಕರ್ಣಿ ಮತ್ತು ದೇವೇಂದ್ರ ಹೆಳವರ

ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರಾಗಿ ಹಿರಿಯ ಪತ್ರಕರ್ತರಾದ ಮಹೇಶ ವಿ. ಶಟಗಾರ, ಆನಂದ ಔದಿ, ಮಲ್ಲಿಕಾರ್ಜುನ ಅಲ್ಲಾಪೂರ, ಖಾಜಾಮೈನುದ್ದೀನ ಪಟೇಲ, ಸಂಜಯ ಕುಲಕರ್ಣಿ ಹಾಗೂ ಪರಶುರಾಮ ಪವಾರ ಸಲಹಾ ಸಮಿತಿ ಸದಸ್ಯರಾಗಿ ಹಿರಿಯ ಪತ್ರಕರ್ತರಾದ ಗೋಪಾಲ ನಾಯಕ, ರಫೀ ಭಂಡಾರಿ, ರುದ್ರಪ್ಪ ಆಸಂಗಿ, ವಾಸುದೇವ ಹೆರಕಲ್, ಅಲ್ಲಮಪ್ರಭು ಮಲ್ಲಿಕಾರ್ಜುನಮಠ, ಕೆ. ಎನ್.ರಮೇಶ, ಜಿ.ಎಸ್. ಕಮತರ, ಸೀತಾರಾಮ ಕುಲಕರ್ಣಿ, ರಾಜು ಕೊಂಡಗೂಳಿ, ಟಿ.ಕೆ. ಮಲಗೊಂಡ, ಫಿರೋಜ ರೋಜಿನದಾರ, ಮಂಜುನಾಥ ಕೋಣಸೂರ, ಅಶೋಕ (ರಾಜು) ಕುಲಕರ್ಣಿ, ಬಸವರಾಜ ಸಂಪಳ್ಳಿ, ಬಾಬು ತಡಲಗಿ ಹಾಗೂ ಜಿಲ್ಲಾ ವಾರ್ತಾ ಮತ್ತು ಪ್ರಚಾರ ಅಧಿಕಾರಿ ಅಮರೇಶ ದೊಡಮನಿ

ಲೆಕ್ಕ ಪರಿಶೋಧಕರಾಗಿ (ಚಾರ್ಟರ್ಡ್ ಅಕೌಂಟೆಂಟ್) ಯಲ್ಲಾಲಿಂಗ ಜನವಾಡ, ಕಾನೂನು ಸಲಹೆಗಾರರಾಗಿ ಸಂಗಮೇಶ ಹೌದೆ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ ಎಂದು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಇಂದುಶೇಖರ ಮಣೂರ ತಿಳಿಸಿದ್ದಾರೆ.

ಸಭೆಯಲ್ಲಿ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಪ್ರಕಾಶ ಬೆಣ್ಣೂರ, ಜಿಲ್ಲಾ ಉಪಾಧ್ಯಕ್ಷರಾದ ಶಶಿಕಾಂತ ಮೆಂಡೆಗಾರ, ಸಮೀರ ಇನಾಮದಾರ, ಬಸವರಾಜ ಉಳ್ಳಾಗಡ್ಡಿ, ಕೋಶಾಧಿಕಾರಿ ರಾಹುಲ್ ಆಪ್ಟೆ ಹಾಗೂ ಕಾರ್ಯದರ್ಶಿ ಸದ್ದಾಂಹುಸೇನ ಜಮಾದಾರ ಪಾಲ್ಗೊಂಡಿದ್ದರು.


# ಸೇತುವೆ ಮೇಲಿಂದ ಟಿಪ್ಪರ್ ನದಿಗೆ ಉರುಳಿ ಅಪಘಾತ!

■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ವಿಜಯಪುರ ಹುಬ್ಬಳ್ಳಿ ರಾಷ್ಟ್ರೀಯ ಹೆದ್ದಾರಿ 52ರಲ್ಲಿ ಬುಧವಾರ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಟಿಪ್ಪರ್ ಒಂದು ಕೊಲ್ಹಾರ ಸೇತುವೆಯಿಂದ ಕೃಷ್ಣಾ ನದಿಗೆ ಉರುಳಿ ಅಪಘಾತ ಸಂಭವಿಸಿದ ಘಟನೆ ನಡೆದಿದೆ.

ಬಾಗಲಕೋಟೆ ಜಿಲ್ಲೆಯ ಗದ್ದನಕೇರಿ ಕ್ರಾಸ್‌ನಿಂದ ಕೊಲ್ಹಾರದತ್ತ ಬರುತ್ತಿದ್ದ ಟಿಪ್ಪರ್, ಕಾರನ್ನು ಓವರ್‌ಟೇಕ್ ಮಾಡುವ ವೇಳೆ ಕಾರಿಗೆ ಡಿಕ್ಕಿ ಹೊಡೆದು ನಿಯಂತ್ರಣ ತಪ್ಪಿ ಸೇತುವೆಯ ಮೇಲಿಂದ ನದಿಗೆ ಬಿದ್ದಿದೆ ಎಂದು ತಿಳಿದುಬಂದಿದೆ.

**ಕೊಲ್ಹಾರ - ಬೀಳಗಿ ನಡುವಿನ ಸೇತುವೆ ಮೇಲೆ ನಡೆದ ಅಪಘಾತ । ಚಾಲಕ ನಾಪತ್ತೆ, ಸಾವಿನ ಶಂಕೆ! । ಚಾಲಕ ಸಹಾಯಕನ ರಕ್ಷಣೆ**



"ಕೃಷ್ಣಾ ನದಿಗೆ ಬಿದ್ದು ಮುಳುಗಿದ ಟಿಪ್ಪರ್ ಮೇಲೆಯೇ ಕುಳಿತುಕೊಂಡು ಸಹಾಯಕ್ಕೆ ಕೂಗಿದ ನನ್ನನ್ನು ನೋಡಿ ಮೀನುಗಾರರು ಸಕಾಲಕ್ಕೆ ಬಂದು ನನ್ನನ್ನು ರಕ್ಷಣೆ ಮಾಡಿದ್ದಾರೆ. ನನಗೆ ನೀರಿನಲ್ಲಿ ಈಜು ಬರುವುದಿಲ್ಲ."



■ ಸಂಜು ಮೂಲಗಿ
ಅಪಘಾತ ಸಂದರ್ಭದಲ್ಲಿ ಟಿಪ್ಪರನಲ್ಲಿದ್ದ ವ್ಯಕ್ತಿ

ಟಿಪ್ಪರ್ ಚಾಲಕ ಬಾಗಲಕೋಟೆ ಜಿಲ್ಲೆ ಬೆಣ್ಣೂರ ಗ್ರಾಮದ ಸಂತೋಷ ಕೋಟಿ ವಾಹನದೊಳಗೆ ಸಿಲುಕಿರುವ ಶಂಕೆ ವ್ಯಕ್ತವಾಗಿದ್ದು, ಇನ್ನೂ ಪತ್ತೆಯಾಗಿಲ್ಲ. ಹೀಗಾಗಿ ಚಾಲಕ ಸಾವನ್ನಪ್ಪಿದ ಶಂಕೆ ಬಲವಾಗಿದೆ.

ರಾತ್ರಿಯಾದ ಹಿನ್ನೆಲೆಯಲ್ಲಿ ಚಾಲಕನ ಶೋಧ ಕಾರ್ಯವನ್ನು ತಾತ್ಕಾಲಿಕವಾಗಿ ನಿಲ್ಲಿಸಲಾಗಿದ್ದು, ಗುರುವಾರ ಕ್ರೇನ್ ಯಂತ್ರದ ಸಹಾಯದಿಂದ ಟಿಪ್ಪರ್ ಅನ್ನು ಹೊರತೆಗೆದು ಮುಂದಿನ ಕಾರ್ಯಾಚರಣೆ ಕೈಗೊಳ್ಳಲಾಗುತ್ತದೆ ಎಂದು ಅಧಿಕಾ–ರಿಗಳು ತಿಳಿಸಿದ್ದಾರೆ. ಇನ್ನೊಂದೆಡೆ, ಟಿಪ್ಪರ್‌ನಲ್ಲಿದ್ದ ಬೀದರ್ ಜಿಲ್ಲೆಯ ಯರಣಗಿ ಗ್ರಾಮದ ನಿವಾಸಿ ಸಂಜು ಮೂಲಗೆ (28) ಅಪಘಾತದ ನಂತರ ನದಿಯಲ್ಲಿ ಮುಳುಗಿದ ಟಿಪ್ಪರ್ ಮೇಲೆಯೇ ಕುಳಿತುಕೊಂಡು ರಕ್ಷಣೆಗಾಗಿ ಮೊರೆ ಇಟ್ಟಿದ್ದು, ಸ್ಥಳೀಯ ಮೀನುಗಾರರು ತೆಪ್ಪದ ಮೂಲಕ ತೆರಳಿ ಅವರನ್ನು ಸುರಕ್ಷಿತವಾಗಿ ರಕ್ಷಿಸಿದ್ದಾರೆ.

ಘಟನಾ ಸ್ಥಳಕ್ಕೆ ಪೊಲೀಸರು ಹಾಗೂ ಅಗ್ನಿಶಾಮಕ ದಳದ ಸಿಬ್ಬಂದಿ ಆಗಮಿಸಿ ಪರಿಶೀಲನೆ ನಡೆಸಿ ಶೋಧ ಕಾರ್ಯ ಕೈಗೊಂಡಿದ್ದಾರೆ.

ಅಪಘಾತದ ಪರಿಣಾಮವಾಗಿ ಕೆಲಕಾಲ ಸೇತುವೆ ಮೇಲೆ ವಾಹನ ಸಂಚಾರಕ್ಕೆ ಅಡಚಣೆ ಉಂಟಾಗಿದ್ದು, ಬಳಿಕ ಬೀಳಗಿ ಮತ್ತು ಕೊಲ್ಹಾರ ಪೊಲೀಸರು ಅಪಘಾತಕ್ಕೀಡಾದ ಕಾರನ್ನು ತೆರವುಗೊಳಿಸಿ ಸಂಚಾರವನ್ನು ಸುಗಮಗೊಳಿಸಿದರು.

ಈ ಘಟನೆಯು ಬಾಗಲಕೋಟೆ ಜಿಲ್ಲೆಯ ಬೀಳಗಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

# ರಾಷ್ಟ್ರೀಯ ಮಂಡಳಿ ಸದಸ್ಯರಾಗಿ ಶರಣು ಮಸಳಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಹಿರಿಯ ಪತ್ರಕರ್ತ ಶರಣಬಸಪ್ಪ ಮಸಳಿ ಅವರನ್ನು ರಾಷ್ಟ್ರೀಯ ಮಂಡಳಿ ಸದಸ್ಯರಾಗಿ ನಾಮನಿರ್ದೇಶನ ಮಾಡಿ ಆದೇಶ ಹೊರಡಿಸಲಾಗಿದೆ.



ನಗರದ ಪತ್ರಿಕಾ ಭವನದಲ್ಲಿ ಜಿಲ್ಲಾಧ್ಯಕ್ಷ ಅಶೋಕ ಯಡಳ್ಳಿ ಅವರ ಅಧ್ಯಕ್ಷತೆಯಲ್ಲಿ ನಡೆದ ಜಿಲ್ಲಾ ಪದಾಧಿಕಾರಿಗಳ ಸಭೆಯಲ್ಲಿ ರಾಷ್ಟ್ರೀಯ ಮಂಡಳಿ ಸದಸ್ಯರಾಗಿ ಹಿರಿಯ ಪತ್ರಕರ್ತ ಶರಣಬಸಪ್ಪ ಮಸಳಿ ಅವರನ್ನು ಸರ್ವಾನುಮತದಿಂದ ಆಯ್ಕೆಮಾಡಲಾಗಿದೆ ಎಂದು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಇಂದುಶೇಖರ ಮಣೂರ ತಿಳಿಸಿದ್ದಾರೆ.

ಹಲವು ದಶಕಗಳಿಂದ ವಿವಿಧ ವಿದ್ಯುನ್ಮಾನ ಮಾಧ್ಯಮ ಸಂಸ್ಥೆಗಳಲ್ಲಿ ಹಾಗೂ ಮುದ್ರಣ ಮಾಧ್ಯಮದಲ್ಲಿ ಸೇವೆ ಸಲ್ಲಿಸುತ್ತಿರುವ ಶರಣಬಸಪ್ಪ ಮಸಳಿಯವರು ಈ ಹಿಂದೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವಿಜಯಪುರ ಜಿಲ್ಲಾ ಘಟಕದ ಜಿಲ್ಲಾ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದಾರೆ. ಅಧ್ಯಕ್ಷರಾಗಿದ್ದ ಅಲ್ಪ ಅವಧಿಯಲ್ಲೇ ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಸಂಘದ ಏಳಿಗೆಗಾಗಿ ಸಾಕಷ್ಟು ಶ್ರಮಿಸಿ, ಎಲ್ಲ ಪತ್ರಕರ್ತರ ಪ್ರಶಂಸೆಗೆ ಪಾತ್ರರಾಗಿದ್ದರು.

# ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಉಪನ್ಯಾಸಕರ ಸಂಘದಿಂದ ಮನವಿ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಸರ್ಕಾರಿ ಮತ್ತು ಅನುದಾನಿತ ಪದವಿ ಪೂರ್ವ ಉಪನ್ಯಾಸಕರು ಪ್ರೌಢಶಾಲೆಯ 9ಮತ್ತು10ನೇ ತರಗತಿ ಮಕ್ಕಳಿಗೆ ಬೋಧಿಸುವುದು ಕಡ್ಡಾಯ ಎಂಬ ಹೊರಡಿಸಿದ ಆದೇಶದ ಹಿನ್ನಲೆಯಲ್ಲಿ ಅದನ್ನು ವಿರೋಧಿಸಿ ಸಿಂದಗಿ ತಾಲೂಕಾ ಉಪನ್ಯಾಸಕರ ಸಂಘದಿಂದ ಪಟ್ಟಣದಲ್ಲಿ ಸಿಂದಗಿ ಮತ್ತು ಆಲಮೇಲ ಸರ್ಕಾರಿ ಮತ್ತು ಅನುದಾನಿತ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರು ಆ ಆದೇಶವನ್ನು ಕೈಬಿಡಬೇಕು ಎಂಬ ಒತ್ತಾಯಿಸಿ ತಹಶೀಲ್ದಾರ ಕರೆಪ್ಪ ಬೆಳ್ಳಿ ಅವರಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಈ ವೇಳೆ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘದ ತಾಲೂಕಾಧ್ಯಕ್ಷ ಸಿದ್ದಲಿಂಗ ಕಿಣಗಿ ಮಾತನಾಡಿ, ಪದವಿಪೂರ್ವ ಕಾಲೇಜುಗಳ ಉಪನ್ಯಾಸಕರಿಗೆ 9ಮತ್ತು10ನೇ ತರಗತಿಗಳಿಗೆ ಕಡ್ಡಾಯವಾಗಿ ಬೋಧನೆ ಮಾಡುವ ಹೆಚ್ಚುವರಿ ಜವಾಬ್ದಾರಿಯನ್ನು ನೀಡಲು ಮುಂದಾಗಿರುವುದು ಉಪನ್ಯಾಸಕರಲ್ಲಿ ತೀವ್ರ ಆತಂಕ ಹಾಗೂ ಅಸಮಾಧಾನಕ್ಕೆ ಕಾರಣವಾಗಿದೆ. ಪ್ರೌಢಶಾಲೆಗಳಲ್ಲಿ ಶಿಕ್ಷಕರ ಕೊರತೆಯನ್ನು ನಿವಾರಿಸುವ ಉದ್ದೇಶ ಸ್ವಾಗತಾರ್ಹವಾದರೂ, ಅದರ ಪರಿಹಾರಕ್ಕಾಗಿ



ಪದವಿಪೂರ್ವ ಕಾಲೇಜುಗಳ ಉಪನ್ಯಾಸಕರ ಮೇಲೆ ಹೆಚ್ಚುವರಿ ಹೊಣೆಗಾರಿಕೆ ಹೊರಿಸುವುದು ವೈಜ್ಞಾನಿಕವೂ ಅಲ್ಲ, ನ್ಯಾಯಸಮ್ಮತವೂ ಅಲ್ಲ. ಇದ–ರಿಂದ ಪದವಿಪೂರ್ವ ಶಿಕ್ಷಣದ ಗುಣಮಟ್ಟ ಕುಸಿಯುವ ಸಾಧ್ಯತೆ ಇದ್ದು, ನೇರ ನೇಮಕಾತಿ ಹಾಗೂ ಬಡ್ತಿ ಪಡೆದ ಸಾವಿರಾರು ಉಪನ್ಯಾಸಕರ ಸೇವಾ ಹಿತಾಸಕ್ತಿಗೂ ಧಕ್ಕೆಯಾಗಲಿದೆ. ಪದವಿಪೂರ್ವ ಕಾಲೇಜುಗಳ ಉಪನ್ಯಾಸಕರು ಸ್ನಾತಕೋತ್ತರ ಪದವಿ ಹಾಗೂ ಬಿ.ಎಡ್. ವಿದ್ಯಾರ್ಹತೆ ಹೊಂದಿರುವ ಗೆಜೆಟೆಡ್–ಬಿ ಅಧಿಕಾರಿಗಳಾಗಿದ್ದು, ಅವರ ಸೇವಾ ನಿಯಮಗಳು, ವೇತನ ಶ್ರೇಣಿ ಹಾಗೂ ಆಡಳಿತಾತ್ಮಕ ಜವಾಬ್ದಾರಿಗಳು ಪ್ರೌಢಶಾಲಾ ಶಿಕ್ಷಕರಿಗಿಂತ ಭಿನ್ನವಾಗಿವೆ. ಇಂತಹ ಸಂದರ್ಭದಲ್ಲಿ ಪ್ರೌಢಶಾಲಾ ಹಂತದ ಬೋಧನೆಯನ್ನು ಕಡ್ಡಾಯಗೊಳಿಸುವುದು ಹುದ್ದೆಯ ಘನತೆಗೆ ಹಾಗೂ ಸೇವಾ ನಿಯಮಗಳಿಗೆ ವಿರುದ್ಧವಾಗುತ್ತದೆ. ಈ ವೇಳೆ ಎಚ್.ಜಿ.ಕಾಲೇಜಿನ ಪ್ರಾಚಾರ್ಯ ಎ.ಆರ್. ಹೆಗ್ಗನದೊಡ್ಡಿ ಮಾತನಾಡಿ, ಈ ಮಹತ್ವದ ತಿದ್ದುಪಡಿ ಕುರಿತು ಶಿಕ್ಷಣ ತಜ್ಞರು, ಉಪನ್ಯಾಸಕರ ಸಂಘಗಳು, ಶಿಕ್ಷಕರ ಪ್ರತಿನಿಧಿಗಳು ಹಾಗೂ ಸಂಬಂಧಿತ ವಿಧಾನ ಪರಿಷತ್ ಸದಸ್ಯರೊಂದಿಗೆ ಯಾವುದೇ ಸಮಾಲೋಚನೆ ನಡೆಸದೇ ಏಕಾಏಕಿ ನಿರ್ಧಾರ ಕೈಗೊಂಡಿರುವುದು ಸೂಕ್ತ ಕ್ರಮವಾಗಿಲ್ಲ. ಕರ್ನಾಟಕ ವಿಶೇಷ ರಾಜ್ಯ ಪತ್ರದ ಕರಡು ತಿದ್ದುಪಡಿಯನ್ನು ತಕ್ಷಣವೇ ಹಿಂಪಡೆಯಬೇಕು, ಪದವಿಪೂರ್ವ ಕಾಲೇಜುಗಳ ಉಪನ್ಯಾಸಕರಿಗೆ 9ಮತ್ತು10ನೇ ತರಗತಿಗಳ ಬೋಧನೆಯನ್ನು ಕಡ್ಡಾಯಗೊಳಿಸುವ ಪ್ರಸ್ತಾವನೆಯನ್ನು ಕೈಬಿಡಬೇಕು, ಶಿಕ್ಷಣ ತಜ್ಞರು, ಉಪನ್ಯಾಸಕರ ಸಂಘಗಳು ಹಾಗೂ ಸಂಬಂಧಿತ ಎಲ್ಲಾ ಹಿತಾಸಕ್ತಿದಾರರೊಂದಿಗೆ ಸಮಾಲೋಚನೆ ನಡೆಸಿ ಸೂಕ್ತ ನಿರ್ಧಾರ ಕೈಗೊಳ್ಳಬೇಕು. ಪ್ರೌಢಶಾಲೆಗಳಲ್ಲಿ ಶಿಕ್ಷಕರ ಕೊರತೆಯನ್ನು ನಿವಾರಿಸಲು ಖಾಲಿ ಹುದ್ದೆಗಳನ್ನು ಶೀಘ್ರದಲ್ಲಿ ಭರ್ತಿ ಮಾಡುವ ಕ್ರಮಕೈಗೊಳ್ಳಬೇಕು ಎಂದು ರಾಜ್ಯ ಸರ್ಕಾರಕ್ಕೆ ಬೇಡಿಕೆಯನ್ನಿಟ್ಟಿದ್ದಾರೆ.

ಈ ವೇಳೆ ವಿವಿಧ ಕಾಲೇಜುಗಳ ಉಪನ್ಯಾಸಕರುಗಳಾದ ಬಿ.ಎಮ್.ಸಿಂಗನಳ್ಳಿ, ಎನ್.ಬಿ.ಪೂಜಾರಿ, ಎಫ್.ಎ.ಹಾಲಪ್ಪನವರ, ಪ್ರಸನ್ನಜೋಗೂರ, ಎಸ್.ಎಸ್.ತಾಳಿಕೋಟಿ, ಎಸ್. ಎಚ್.ಮಡಿವಾಳರ, ಡಾ.ಶರಣಬಸವ ಜೋಗೂರ, ಜಿ.ಎಮ್.ಹೈಯಾಳಕರ, ಎಮ್.ಎನ್.ಅಜ್ಜಪ್ಪ, ಎಸ್.ಜಿ.ಪಾಟೀಲ,, ಸತೀಶ ಬಸರಕೋಡ, ಆರ್. ಎಮ್.ನಾರಾಯಣಕರ, ಗವಿಸಿದ್ದಪ್ಪ ಆನೆಗುಂದಿ, ಪಿ.ಪ್ಪಿ.ಮಹಲಿನಮಠ, ಬಿ.ಬಿ.ಜಮಾದಾರ, ಡಾ.ಪ್ರಮೋದಕಟ್ಟಿ, ಎಮ್.ಬಿ,ಕಲಶೆಟ್ಟಿ ಸೇರಿದಂತೆ ಅನೇಕರು ಇದ್ದರು.

## ಗುತ್ತಿಗೆದಾರನ ಕರಾಮತ್ತು । ಬಡವರಿಗಿಲ್ಲಾ ಇಂದಿರಾ । ಹೊಟ್ಟೆತುಂಬಾ ಊಟ । ಸ್ವಚ್ಚತೆ ಇಲ್ಲಿ ಮರಿಚಿಕೆ

# ಸಮಸ್ಯೆಯ ಸುಳಿಯಲ್ಲಿ ತಾಳಿಕೋಟೆ ಇಂದಿರಾ ಕ್ಯಾಂಟಿನ್

■ ಉದಯರಶ್ಮಿ ದಿನಪತ್ರಿಕೆ

■ ವರದಿ: ಜಿ.ಪಿ. ಘೋರ್ಪಡೆ

ತಾಳಿಕೋಟೆ: ಬಡವರಿಗೆ ಕೂಲಿ ಕಾರ್ಮಿಕರಿಗೆ ಕೈಗೆಟುಕುವ ದರದಲ್ಲಿ ಹೊಟ್ಟೆತುಂಬಾ ಊಟ ಸಿಗಲೆಂಬ ಉದ್ದೇಶದಿಂದ ಮಹತ್ವಾಕಾಂಕ್ಷೀ ಯೋಜನೆಯ ಮೂಲಕ ರಾಜ್ಯದೆಲ್ಲಡೆ ಇಂದಿರಾ ಕ್ಯಾಂಟಿನ್ ಪ್ರಾರಂಬಿಸಿದ್ದರೆ ತಾಳಿಕೋಟೆಯಲ್ಲಿಯ ಇಂದಿರಾ ಕ್ಯಾಂಟಿನ್ ಗುತ್ತಿಗೆದಾರನ ಕರಾಮತ್ತಿನಿಂದ ಬಡವ–ರಿಗೆ ಊಟವೇ ಸಿಗದಂತಹ ಪರಸ್ಥಿತಿ ಎದುರಾಗಿದೆ.

ಇಂದು ಕ್ಯಾಂಟಿನ್ ಓಪನ್ ಆಗಿದ್ದರೆ ನಾಳೆ ಬಂದ್ ಆಗಿರುತ್ತದೆ ದಿನಕ್ಕೆ ಕನಿಷ್ಠ ಬೆಳಿಗ್ಗೆ 300 ಜನರಿಗೆ ಉಪಹಾರ ಮಧ್ಯಾಹ್ನ 300 ಜನರಿಗೆ ಊಟ ಸಂಜೆ 300 ಜನರಿಗೆ ಊಟವೆಂಬ ನಿಯಮವಿದ್ದರೂ ಕೂಡಾ ಎಲ್ಲವನ್ನು ಗಾಳಿಗೆ ತೋರಲಾಗಿದ್ದು ಮೊದಲು ಬಂದವರಿಗೆ ಮಾತ್ರ ಆದ್ಯತೆ ಎಂಬಂತಾಗಿದೆ.

ಬೆಳಿಗ್ಗೆ 8 ಗಂಟೆಗೆ ಪ್ರಾರಂಭವಾದರೆ ಅರ್ದಗಂಟೆಯಲ್ಲಿ




ಸುಮಾರು 50 ಜನರಿಗೆ ಉಪಹಾರ ಸಿಗುವದೇ ಕಷ್ಟವಾಗಿದೆ ಮದ್ಯಾಹ್ನ ತೆರೆದರೆ ಸಂಜೆ ತೆರೆಯುವದಿಲ್ಲಾ ಸಂಜೆ ತೆರೆದರೆ ಮದ್ಯಾಹ್ನ ತೆರೆಯುವದಿಲ್ಲಾ, ಇದು ಇಂದಿರಾ ಕ್ಯಾಂಟಿನ್‌ಗೆ ಬಂದ ದುರ್ಗತಿಯಾಗಿದೆ.

ಇಂದಿರಾ ಕ್ಯಾಂಟಿನ್‌ಗೆ ಆಗಮಿಸುವ ಗ್ರಾಹಕರಿಗೆ ಶುದ್ದ ಕುಡಿಯುವ ನೀರು ಒದಗಿಸಬೇಕೆಂಬ ನಿಯಮವಿದ್ದರೂ ಕೂಡಾ ಪ್ಲೋರಾಯ್ಡ್ ಯುಕ್ತ ಬೋರವ್ವೇಲ್ ನೀರನ್ನು ಇಡಲಾಗಿರುತ್ತದೆ. ಇಂದು ಬೋರವ್ವೇಲ್ ನೀರು ಶೇಕರಿಸಿದ್ದರೆ ವಾರಗಟ್ಟಲೇ ನೀರು ಬದಲಾವಣೆಯಾಗುವದಿಲ್ಲ. ನೀರು ಸಂಪೂರ್ಣ ಖಾಲಿಯಾದ ನಂತರವೇ ಮತ್ತೆ ನೀರು ತುಂಬಿಸಲಾಗುತ್ತದೆ. ಕುಡಿಯಲು ಮತ್ತು ಗ್ರಾಹಕರು ತಿಂದ ಪ್ಲೇಟ್ ತೊಳೆಯಲು ಎಲ್ಲದಕ್ಕೂ ಇದೇ ನೀರನ್ನೇ ಬಳಸಲಾಗುತ್ತಿದೆ.

ಇನ್ನಾದರೂ ಸಂಬಂದಿಸಿದ ಅಧಿಕಾ–ರಿಗಳು ಇತ್ತಕಡೆ ಗಮನ ಹರಿಸಿ ಬಡವರ ಕೂಲಿ ಕಾರ್ಮಿಕರಿಗೆ ಕೈಗೆಟಕುವ ದರದಲ್ಲಿ ಹೊಟ್ಟೆತುಂಬಾ ಊಟಕೊಡಿಸಲು ಮುಂದಾಗುತ್ತಾರೋ ಕಾದು ನೋಡಬೇಕಿದೆ.

"ಇಂದಿರಾ ಕ್ಯಾಂಟಿನಲ್ಲಿ ಬಡವರಿಗೆ ಉಪಹಾರ ಮತ್ತು ಊಟ ಸಿಗುವದರ ಬಗ್ಗೆ ಮತ್ತು ಸ್ವಚ್ಚತೆ ಇಲ್ಲದಿರುವ ಬಗ್ಗೆ ಹಾಗೂ ಶುದ್ದಿ ಕುಡಿಯುವ ನೀರು ಬಳಕೆ ಮಾಡದಿರುವ ಬಗ್ಗೆ ದೂರು ಬಂದಿದೆ. ಕೂಡಲೇ ಕ್ಯಾಂಟಿಗೆ ಭೇಟಿ ನೀಡಿ ಪರಿಶೀಲಿಸಿ ಸೂಕ್ತ ಕ್ರಮ ಜರುಗಿಸುತ್ತೇನೆ."

■ ವಸಂತ ಪವಾರ
ಮುಖ್ಯಾಧಿಕಾರಿ, ಪುರಸಭೆ
ತಾಳಿಕೋಟೆ

### ಸ್ವಚ್ಚತೆ ಎಂಬುದು ಮರಿಚಿಕೆ

ಕಳೆದ 1 ವರ್ಷದಿಂದ ಪ್ರಾರಂಭಗೊಂಡಿರುವ ಇಂದಿರಾ ಕ್ಯಾಂಟಿನ್‌ನಲ್ಲಿ ಸ್ವಚ್ಚತೆ ಎಂಬುದೇ ಮರಿಚಿಕೆಯಾಗಿದೆ. ಗ್ರಾಹಕರು ತಿಂದ ಪ್ಲೇಟ್‌ದಿಂದ ಚೆಲ್ಲಿದ ಎಲ್ಲ ಮುಸರೆಯನ್ನು ಮರುದಿನವೇ ಸ್ವಚ್ಚಮಾಡಲಾಗುತ್ತಿದ್ದರಿಂದ ಕ್ಯಾಂಟಿನ್‌ಗೆ ಆಗಮಿಸುವ ಗ್ರಾಹಕರಿಗೆ ತಲೆಗಿಂವಿಗುಟುವ ವಾಸನೆ ಇಂದಿರಾ ಕ್ಯಾಂಟಿನತ್ತ ಮುಖಮಾಡದಂತೆ ಮಾಡುತ್ತಿದೆ. ಉಳಿದು ಚೆಲ್ಲಿದ ಪದಾರ್ಥ ಮುಂದಿನ ಚರಂಡಿಗೆ ಚೆಲ್ಲಲಾಗುತ್ತಿದೆ. ಸ್ವಚ್ಚತೆಯ ದೃಷ್ಠಿಯಿಂದಾದರೂ ಚರಂಡಿಗೆ ನೀರು ಬಿಟ್ಟು ಸ್ವಚ್ಚತೆ ಕಾಪಾಡಬಹುದಿತ್ತು. ಆದರೆ ಇದ್ಯಾವುದನ್ನು ಮಾಡದೇ ಸಾಗಿದ್ದರಿಂದ ಕ್ಯಾಂಟಿಗೆ ಗ್ರಾಹಕರು ಬರಲು ಹಿಂದೇಟು ಹಾಕುವಂತೆ ಮಾಡಿದೆ.

"ತಾಳಿಕೋಟೆಯ ಇಂದಿರಾ ಕ್ಯಾಂಟಿನಲ್ಲಿ ಬಡವರಿಗೆ ಉಪಹಾರವು ಮತ್ತು ಊಟವೂ ಸಿಗುತ್ತಿಲ್ಲ. ಒಂದು ದಿನ ತೆಗೆದರೆ ಮರುದಿನ ಮುಚ್ಚಿರುತ್ತದೆ. ನಿತ್ಯ ನೂರಾರು ಜನ ಕೂಲಿಕಾರ್ಮಿಕರು ಆಗಮಿಸುತ್ತಾರೆ. ಕೆಲವು ಜನರಿಗೆ ಉಪಹಾರ, ಊಟ ಸಿಕ್ಕರೆ ಇನ್ನು ಕೆಲವು ಜನರಿಗೆ ಸಿಗುವದಿಲ್ಲ. ಸ್ವಚ್ಚತೆ ಎಂಬುದು ಮರಿಚಿಕೆಯಾಗಿದೆ. ಗುತ್ತಿಗೆದಾರನು ಬೇಕಾಬಿಟ್ಟಿ ಕ್ಯಾಂಟಿನ್ ನಡೆಸುತ್ತಿದ್ದಾರೆ. ಸಂಬಂಧಿಸಿದ ಅಧಿಕಾರಿಗಳು ಗುತ್ತಿಗೆದಾರನ ಮೇಲೆ ಕ್ರಮ ಜರುಗಿಸಿ ಬಡವರಿಗೆ ಅನುಕೂಲ ಕಲ್ಪಿಸಬೇಕು."

■ ಬಸ್ಸು ಕಟ್ಟಿಮನಿ (ಮಾದರ)
ಅಂಬೇಡ್ಕರ ಸೇನೆ ಸಂಘಟನೆ ಜಿಲ್ಲಾ ಉಪಾಧ್ಯಕ್ಷ

### ಸರ್ಕಾರದ ದುಡ್ಡು ಪೋಲು

ಬಡವರಿಗೆ ಮತ್ತು ಕೂಲಿ ಕಾರ್ಮಿಕ–ರಿಗಾಗಿ ಪ್ರಾರಂಬಿಸಲಾಗಿರುವ ಇಂದಿರಾ ಕ್ಯಾಂಟಿನ್ ನಿರ್ವಹಣೆಗೆ ಸರ್ಕಾರವು ಲಕ್ಷಾಂತರ ರೂ. ಖರ್ಚು ವೆಚ್ಚ ಮಾಡುತ್ತಿದೆ. ಆದರೆ ಬಡವರಿಗೆ ಒಪ್ಪತ್ತಿನ ತುತ್ತಿನ ಚೀಲ ತುಂಬಿಸಲೂ ಕೂಡಾ ನಿರ್ವಹಣೆಯ ಗುತ್ತಿಗೆದಾರರು ಮಾಡದಿರುವುದು ಮೇಲ್ನೋಟಕ್ಕೆ ಸ್ಪಷ್ಟವಾಗಿ ಗೋಚರಿಸುತ್ತಿದ್ದು, ಸರ್ಕಾರದಿಂದ ಪ್ರತಿ ತಿಂಗಳು ಲಕ್ಷಾಂತರ ಗುತ್ತಿಗೆದಾರನು ಪಡೆದುಕೊಂಡು ತನ್ನ ಜೇಬು ತುಂಬಿಸಿಕೊಳ್ಳುತ್ತಿದ್ದಾನೆಂಬ ದೂರು ಕೂಲಿ ಕಾರ್ಮಿಕರದ್ದಾಗಿದೆ.

# ಕಾನಿಪ ಸಂಘಕ್ಕೆನಾಮ ನಿರ್ದೇಶಿತ ಸದಸ್ಯರಾಗಿ ಅಲ್ಲಾಪುರ ಆಯ್ಕೆ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ವಿಜಯಪುರ ಪತ್ರಿಕಾ ಭವನದಲ್ಲಿ ಜೂ.30ರಂದು ನಡೆದ ಜಿಲ್ಲಾ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಜಿಲ್ಲಾ ಪದಾಧಿಕಾರಿಗಳ ಸಮ್ಮುಖದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವಿಜಯಪುರ ಜಿಲ್ಲಾ ಕಾರ್ಯಕಾರಿ ಸಮಿತಿಗೆ ಸಿಂದಗಿಯ ಹಿರಿಯ ಪತ್ರಕರ್ತ ಮಲ್ಲಿಕಾರ್ಜುನ ಅಲ್ಲಾಪುರ ಅವರನ್ನು ನಾಮ ನಿರ್ದೇಶಿತ ಸದಸ್ಯರಾಗಿ ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ. ಹಿರಿಯ ಪತ್ರಕರ್ತರಾಗಿರುವ ಮಲ್ಲಿಕಾರ್ಜುನ ಅಲ್ಲಾಪುರ ಅವರು ಹಲವು ವರ್ಷಗಳಿಂದ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿದ್ದು, ಅವರ ಅನುಭವ ಮತ್ತು ಸೇವೆಯನ್ನು ಪರಿಗಣಿಸಿ ಈ ಜವಾಬ್ದಾರಿಯನ್ನು ನೀಡಲಾಗಿದೆ. ಜಿಲ್ಲೆಯ ಪತ್ರಕರ್ತರ ಸಂಘಟನೆಯನ್ನು ಇನ್ನಷ್ಟು ಬಲಪಡಿಸುವ ನಿಟ್ಟಿನಲ್ಲಿ ಅವರು ಕಾರ್ಯನಿರ್ವಹಿಸಲಿದ್ದಾರೆ ಎಂದು ಜಿಲ್ಲಾಧ್ಯಕ್ಷ ಅಶೋಕ ಯಡಹಳ್ಳಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಇಂದುಶೇಖರ ಮಣೂರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ಚುನಾವಣೆಗಳೇ ಪ್ರಜಾಪ್ರಭುತ್ವದ ಜೀವಾಳ :ಸವಿತಾ

■ ಉದಯರಶ್ಮಿ ದಿನಪತ್ರಿಕೆ

ಜಮಖಂಡಿ: ಚುನಾವಣೆಗಳೇ ಪ್ರಜಾಪ್ರಭುತ್ವದ ಜೀವಾಳವಾಗಿದ್ದು ಮಕ್ಕಳು ಶಾಲಾ ಹಂತದಲ್ಲಿಯೇ ಮತದಾನದ ಮಹತ್ವದ ಕುರಿತು ಅರಿಯಬೇಕು. ಚುನಾವಣೆಯ ಪ್ರಕ್ರಿಯೆಗಳನ್ನು ಸರಿಯಾಗಿ ತಿಳಿದುಕೊಳ್ಳಬೇಕು. ಸಂವಿಧಾನದ ಆಶಯವನ್ನು ಅಳವಡಿಸಿಕೊಳ್ಳಬೇಕು ಎಂದು ಮತದಾರ ಸಾಕ್ಷರತಾ ಸಂಘದ ಸಂಚಾಲಕರಾದ ಶಿಕ್ಷಕಿ ಸವಿತಾ ಬೆನಕಟ್ಟಿ ಹೇಳಿದರು.

ಅವರು ಕುಂಬಾರಹಳ್ಳ ಪಿಎಂ ಶ್ರೀ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ನಡೆದ ಸಂಸತ್ತ ಚುನಾವಣೆಯ ಸಂಚಾಲತ್ವವಹಿಸಿ ಮಾತನಾಡಿ, ಭಾರತ ಜಗತ್ತಿನಲ್ಲಿಯೇ ಅತಿದೊಡ್ಡ ಪ್ರಜಾಪ್ರಭುತ್ವ ದೇಶವಾಗಿದ್ದು ಇಲ್ಲಿ ಪ್ರಜೆಗಳೇ ಪ್ರಭುಗಳಾಗಿದ್ದಾರೆ. ಮತಗಳೇ ಪ್ರಭುತ್ವವನ್ನು ನಿರ್ಧರಿಸುತ್ತವೆ. ಮುಂದಿನ ಪ್ರಜೆಗಳಾದ ಮಕ್ಕಳು ವಿದ್ಯಾರ್ಥಿದೆಸೆಯಿಂದಲೆ ಪವಿತ್ರ ಮತದಾನದ ಮಹತ್ವ ಅರಿಯುವಂತಾಗಲು ಶಾಲಾ ಚುನಾವಣೆಗಳು ಪ್ರಮುಖ ಪಾತ್ರ ವಹಿಸುತ್ತವೆ ಎಂದರು.

ಸಾರ್ವತ್ರಿಕ ಚುನಾವಣೆಗಳು ನಡೆಯುವ ಮಾದರಿಯಲ್ಲಿಯೇ ಮತಪೆಟ್ಟಿಗೆಗಳನ್ನು ಬಳಸಿ ಮಕ್ಕಳಿಂದ ಮತದಾನ ಮಾಡಿಸಲಾಯಿತು. ಮತದಾನದ ಪ್ರಾತ್ಯಕ್ಷಿಕೆಯಲ್ಲಿ ಎಸ್.ಡಿ.ಎಮ್.ಸಿ ಅಧ್ಯಕ್ಷ ನಿಂಗಪ್ಪ ತೇರದಾಳ, ಸದಸ್ಯರಾದ ಪದ್ಮಾ ಹುದಲಿ, ಶೈಲಾ ಮಾಳಿ, ಅಪ್ಪಸಾಬ್ ನದಾಫ್ ಉಪಸ್ಥಿತರಿದ್ದು ಚುನಾವಣೆಗೆ ಚಾಲನೆ ನೀಡಿದರು.

ಮಕ್ಕಳು ಅತ್ಯಂತ ಸಂತಸದಿಂದ ತಮ್ಮ ಹಕ್ಕನ್ನು ಚಲಾಯಿಸಿದರು. ಚುನಾವಣೆಯ ನಂತರ ಮತಗಳನ್ನು ಎಣಿಕೆ ಮಾಡಿ ಸದಸ್ಯರನ್ನು ಆಯ್ಕೆ ಮಾಡಲಾಯಿತು.ಮಕ್ಕಳೇ ಮತಗಟ್ಟೆ ಅಧಿಕಾರಿಗಳಾಗಿ, ಪೋಲಿಂಗ ಆಫೀಸರ್ ಆಗಿ, ಪೊಲೀಸ್ ಸಿಬ್ಬಂದಿಯಾಗಿ ಕಾರ್ಯ ನಿರ್ವಹಿಸಿದರು.

ಮುಖ್ಯಶಿಕ್ಷಕ ನಾರಾಯಣ ಶಾಸ್ತ್ರಿ ಫಲಿತಾಂಶ ಘೋಷಿಸಿ *ಚುನಾವಣೆಯಲ್ಲಿ ಸೋಲು ಗೆಲುವು ಮುಖ್ಯವಲ್ಲ, ಭಾಗವಹಿಸುವಿಕೆ ಮುಖ್ಯ .ಭಾರತದ ಭಾಗ್ಯವಿಧಾತರಾದ ನೀವೆಲ್ಲರೂ ಉತ್ತಮಪ್ರಜೆಗಳಾಗಿ ದೇಶಸೇವೆಯನ್ನು ಮಾಡಿ ಸಮಾಜದ ಋಣ ತೀರಿಸಬೇಕು ಎಂದರು.

ಶಿಕ್ಷಕರಾದ ಸಂಗಮೇಶ ಉಟಗಿ, ಚಂದ್ರಕಾಂತ ಪೋಲಿಸ್, ಅಶೋಕ ಬಿರಾದಾರ ಪಾಟೀಲ, ಶಾರದಾ ಮತ ಎಣಿಕೆ ಅಧಿಕಾರಿಗಳಾಗಿ ಕಾರ್ಯ ನಿರ್ವಹಿಸಿದರು. ಶಿಕ್ಷಕರಾದ ಬಾಹುಬಲಿ ಮುತ್ತೂರ, ಮಂಜುಳಾ ಕಡಕೋಳ, ಆಸೀಫಾಭಾನು ಮೊಮಿನ್,ಶಕುಂತಲಾ ಬಿರಾದಾರ ಸಂಪನ್ಮೂಲ ವ್ಯಕ್ತಿಗಳಾಗಿ ಮಕ್ಕಳಿಗೆ ತರಬೇತಿ ನೀಡಿದರು.

ನಡೆದಂಥ ಚುನಾವಣೆಯಲ್ಲಿ ಶ್ರವಣ ಯಮನಪ್ಪ ತೇಲಿ 95, ಶ್ರವಣ ಅಡೆವಪ್ಪ ಇಂಡಿ 93, ಚೈತ್ರಾ ನಿಂಗಪ್ಪ ತೇರದಾಳ 88, ಪೂರ್ಣಿಮಾ ಲಕ್ಷ್ಮಣ ಜೋಗಪ್ಪಗೋಳ 88, ಭವಾನಿ ಸದಾಶಿವ ಮಾಳಿ 82, ಶ್ವೇತಾ ಹಣಮಂತ ನ್ಯಾಮಗೌಡ 80, ಮಾದೇವ ಅಮೋಘಿ ಕುರಣಿ 78, ಸಾತ್ವಿಕ ಸಿದ್ಧಪ್ಪ ನರಸನ್ನವರ 77, ಸಂಜು ಬಸಪ್ಪ ಮಾಂಗ 71,ಮಂಜುನಾಥ ಸಾಬು ನಾಟಿಕಾರ 70 ಅತ್ಯಧಿಕ ಮತ ಪಡೆದು 2026–27ನೆಯ ಶಾಲಾ ಸಂಸತ್ತಿಗೆ ಆಯ್ಕೆಯಾದರು. ಒಟ್ಟು ಚಲಾವಣೆಯಾದ ಮತಗಳು 206. ತಿರಸ್ಕೃತಗೊಂಡ ಮತಗಳು 02.

ಶಿಕ್ಷಕ ಸಂಗಮೇಶ ಉಟಗಿ ಸ್ವಾಗತಿಸಿದರು, ಚಿತ್ರಕಲಾ ಶಿಕ್ಷಕ ಚಂದ್ರಕಾಂತ ಪೋಲೀಸ್ ವಂದಿಸಿದರು. ಶಿಕ್ಷಕಿ ಮೋಮಿನ್ ಅವರು ನಿರೂಪಿಸಿದರು.

# ಶುಲ್ಕ ಮರುಪಾವತಿ :ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ 2026–27ನೇ ಶೈಕ್ಷಣಿಕ ಸಾಲಿನಲ್ಲಿ ವೃತ್ತಿಪರ ಹಾಗೂ ತಾಂತ್ರಿಕ ಕೋರ್ಸುಗಳಿಗೆ ಪ್ರವೇಶ ಪಡೆಯುವ ಅಲ್ಪಸಂಖ್ಯಾತ ಸಮುದಾಯದ ಅರ್ಹ ವಿದ್ಯಾರ್ಥಿಗಳಿಂದ ಶುಲ್ಕ ಮರುಪಾವತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಮೆಟ್ರಿಕ್ ನಂತರದ ಪದವಿ ಪೂರ್ವ, ಪದವಿ, ಸ್ನಾತಕೋತ್ತರ, ವೃತ್ತಿಪರ ಹಾಗೂ ಎಂ.ಫಿಲ್ ಮತ್ತು ಪಿ.ಎಚ್.ಡಿ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಕರ್ನಾಟಕ ರಾಜ್ಯದ ಅರ್ಹ ಅಲ್ಪಸಂಖ್ಯಾತ ವಿದ್ಯಾರ್ಥಿಗಳು ವಿದ್ಯಾರ್ಥಿವೇತನ ಪೋರ್ಟಲ್ (ಎಸ್.ಎಸ್.ಪಿ) ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲಬಹುದಾಗಿದೆ. ಅರ್ಹ ಅಭ್ಯರ್ಥಿಗಳು ಮೆಟ್ರಿಕ್ ನಂತರದ ಹಾಗೂ ಮೆರಿಟ್–ಕಂ–ಮೀನ್ಸ್ ವಿದ್ಯಾರ್ಥಿವೇತನಕ್ಕಾಗಿ ಸೆಪ್ಟೆಂಬರ್30ರೊಳಗಾಗಿ https://ssp.postmatric.karnataka.gov.in ಜಾಲತಾಣದಲ್ಲಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ವಿದ್ಯಾರ್ಥಿಗಳು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕೃತ ಜಾಲತಾಣ https://dom.karnataka.gov.in ಅಥವಾ ಸಮೀಪದ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಪ್ರಕಟಣೆ ತಿಳಿಸಿದೆ.

# ಪತ್ನಿ ಕೊಲೆ ಪ್ರಕರಣದ ಆರೋಪಿಗೆ ಜೀವಾವಧಿ ಶಿಕ್ಷೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಪತ್ನಿಯನ್ನು ಕೊಲೆಗೈದು ಸಾಕ್ಷ್ಯ ನಾಶಪಡಿಸಲು ಯತ್ನಿಸಿದ್ದ ಪ್ರಕರಣದಲ್ಲಿ ಆರೋಪಿಗೆ ಜೀವಾವಧಿ ಶಿಕ್ಷೆ ಹಾಗೂ 1 ಲಕ್ಷ ದಂಡ ವಿಧಿಸಿ ವಿಜಯಪುರದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ತೀರ್ಪು ನೀಡಿದೆ.

ಪ್ರಕರಣದ ವಿವರದಂತೆ, ವಿಜಯಪುರ ನಗರದ ಜಲನಗರ ಪೊಲೀಸ್ ಠಾಣೆ ವ್ಯಾಪ್ತಿಯ ಶಿವಶಕ್ತಿ ನಗರದಲ್ಲಿ ಬಾಡಿಗೆ ಮನೆಯಲ್ಲಿ ವಾಸವಾಗಿದ್ದ ರಫೀಕ ತಂದೆ ಅಸ್ತಗೀರಸಾಬ ಬಳಗಾನೂರ ತನ್ನ ಪತ್ನಿ ಪರ್ವಿನ್ ಅವರ ಶೀಲದ ಬಗ್ಗೆ ಅನುಮಾನ ಪಟ್ಟು ನಿರಂತರವಾಗಿ ಕಿರುಕುಳ ನೀಡುತ್ತಿದ್ದ. ಈ ಕುರಿತು ಹಿರಿಯರು ಪಂಚಾಯಿತಿ ನಡೆಸಿ ಬುದ್ಧಿವಾದ ಹೇಳಿದ್ದರೂ, ಆತ ತನ್ನ ಪತ್ನಿಗೆ ಕಿರುಕುಳ ನೀಡುವುದನ್ನು ನಿಲ್ಲಿಸಿರಲಿಲ್ಲ.

2016ರ ಅಕ್ಟೋಬರ್ 17ರ ರಾತ್ರಿ 8 ಗಂಟೆಯಿಂದ ಅಕ್ಟೋಬರ್ 20ರ ಮಧ್ಯಾಹ್ನ 3 ಗಂಟೆಯ ನಡುವಿನ ಅವಧಿಯಲ್ಲಿ, ರಫೀಕ ತನ್ನ ಪತ್ನಿ ಪರ್ವಿನ್ ಅವರ ಕುತ್ತಿಗೆ, ಎದೆ, ಬೆನ್ನು ಹಾಗೂ ಭುಜದ ಭಾಗಗಳಿಗೆ ಹರಿತವಾದ ಆಯುಧದಿಂದ ಹಲ್ಲೆ ನಡೆಸಿ ಕೊಲೆ ಮಾಡಿದ್ದಾನೆ. ಬಳಿಕ ಸಾಕ್ಷ್ಯ ನಾಶಪಡಿಸುವ ಉದ್ದೇಶದಿಂದ ಮನೆಯ ಬಾಗಿಲಿಗೆ ಬೀಗ ಹಾಕಿ ಪರಾರಿಯಾಗಿದ್ದನು.ಈ ಸಂಬಂಧ ಜಲನಗರ ಪೊಲೀಸರು ಆರೋಪಿಯ ವಿರುದ್ಧ ಭಾರತೀಯ ದಂಡ ಸಂಹಿತೆಯ (ಐಪಿಸಿ) ಕಲಂ 302 (ಕೊಲೆ) ಹಾಗೂ 201 (ಸಾಕ್ಷ್ಯ ನಾಶ) ಅಡಿಯಲ್ಲಿ ಪ್ರಕರಣ ದಾಖಲಿಸಿ ನ್ಯಾಯಾಲಯಕ್ಕೆ ದೋಷಾರೋಪಣಾ ಪತ್ರ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ವಿಜಯಪುರದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಹರೀಶ್ ಎ. ಅವರು ಅಭಿಯೋಗದ ಪರ ಮಂಡಿಸಲಾದ ಸಾಕ್ಷ್ಯಾಧಾರಗಳನ್ನು ಪರಿಗಣಿಸಿ, ಆರೋಪಿಯ ವಿರುದ್ಧದ ಆರೋಪ ಸಾಬೀತಾಗಿದೆ ಎಂದು ತೀರ್ಮಾನಿಸಿದರು. ಅದರಂತೆ ಆರೋಪಿ ರಫೀಕ ತಂದೆ ಅಸ್ತಗೀರಸಾಬ ಬಳಗಾನೂರನಿಗೆ ಜೀವಾವಧಿ ಶಿಕ್ಷೆ ಹಾಗೂ 1,00,000 ದಂಡ ವಿಧಿಸಿ, 2026ರ ಜೂನ್ 30ರಂದು ತೀರ್ಪು ಪ್ರಕಟಿಸಿದರು.

ಪ್ರಕರಣವನ್ನು ಅಂದಿನ ಪಿಎಸ್‌ಐ ಎನ್.ಎಸ್. ಜನಗೌಡ ದಾಖಲಿಸಿಕೊಂಡಿದ್ದರು. ತನಿಖೆಯನ್ನು ಸಿಪಿಐ ಬಸವರಾಜ ಯಲಗಾರ್ ಹಾಗೂ ಸುನೀಲ್ ಕಾಂಬಳೆ ನಡೆಸಿದ್ದರು. ನ್ಯಾಯಾಲಯದಲ್ಲಿ ಸಾಕ್ಷಿದಾರರನ್ನು ಹಾಜರುಪಡಿಸುವ ಕಾರ್ಯವನ್ನು ಹೆಡ್ ಕಾನ್ಸ್‌ಟೇಬಲ್ ಜೆ.ಪಿ. ಪವಾರ ನಿರ್ವಹಿಸಿದ್ದರು. ಸರ್ಕಾರದ ಪರವಾಗಿ ಪ್ರಧಾನ ಸರ್ಕಾರಿ ಅಭಿಯೋಜಕ ಎಸ್.ಎಚ್. ಹಕೀಮ್ ವಾದ ಮಂಡಿಸಿದರು.

# ಸಾವಯವ ಕೃಷಿ, ಬೆಳೆಗಳ ಸುಧಾರಿತ ಬೇಸಾಯ ಪದ್ಧತಿಗಳ ವಿಶೇಷ ತರಬೇತಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲಾ ಕೃಷಿ ತರಬೇತಿ ಕೇಂದ್ರ (ಡಿಎಟಿಸಿ) ರೈತ ಹಾಗೂ ರೈತ ಮಹಿಳೆಯರಿಗಾಗಿ ಸಾವಯವ ಕೃಷಿ, ಈರುಳ್ಳಿ ಹಾಗೂ ವೀಳ್ಯದೆಲೆ ಬೆಳೆಗಳ ಸುಧಾರಿತ ಬೇಸಾಯ ಪದ್ಧತಿಗಳು ವಿಷಯದ ಕುರಿತು ವಿಶೇಷ ತರಬೇತಿಯು ಜುಲೈ 2ರಂದು ಬೆಳಿಗ್ಗೆ 10 ಗಂಟೆಗೆ ಕೂಡಗಿ ಪಿಕೆಪಿಎಸ್ ನಲ್ಲಿ ಆಯೋಜಿಸಲಾಗಿದೆ. ತರಬೇತಿ ಕಾರ್ಯಕ್ರಮದಲ್ಲಿ ಸಾವಯವ ಕೃಷಿಯ ಮಹತ್ವ, ಈರುಳ್ಳಿ ಹಾಗೂ ವೀಳ್ಯದೆಲೆ ಬೆಳೆಗಳ ವೈಜ್ಞಾನಿಕ ಬೇಸಾಯ ಪದ್ಧತಿಗಳು, ಪೋಷಕಾಂಶಗಳ ಸಮರ್ಪಕ ನಿರ್ವಹಣೆ, ಕೀಟ ಹಾಗೂ ರೋಗಗಳ ಸಮಗ್ರ ನಿರ್ವಹಣೆ ಸೇರಿದಂತೆ ವಿವಿಧ ಕೃಷಿ ತಾಂತ್ರಿಕ ವಿಷಯಗಳ ಕುರಿತು ಕೃಷಿ ತಜ್ಞರು ರೈತರಿಗೆ ಸಮಗ್ರ ಮಾಹಿತಿ ನೀಡಲಿದ್ದಾರೆ. ಕೂಡಗಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಕೃಷಿ ತಜ್ಞರ ಮಾರ್ಗದರ್ಶನ ಪಡೆದುಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕೃಷಿ ಅಧಿಕಾರಿ ಫಾತೀಮಾ ಬಾನು ಸುತಾರ್ ಮೊ: 8277930619 ಸಂಪರ್ಕಿಸಬಹುದು ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಉಪ ನಿರ್ದೇಶಕರ ಪ್ರಕಟಣೆ ತಿಳಿಸಿದೆ.

# ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಜಾಗೃತಿ ಜಾಥಾ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಇವರ ಸಹಯೋಗದಲ್ಲಿ ನಗರದಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ–2026 ಕುರಿತು ಬೃಹತ್ ಸೈಕಲ್ ಜಾಥಾ ಆಯೋಜನೆ ಮಾಡುವ ಮೂಲಕ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಜಾಗೃತಿ ಜಾಥಾಕ್ಕೆ ಜಿಲ್ಲಾ ಪಂಚಾಯತಿಯ ಮುಖ್ಯ ಲೆಕ್ಕಾಧಿಕಾರಿಗಳಾದ ರಾಮಣ್ಣ ಅಥಣಿ ಹಾಗೂ ಯೋಜನಾ ನಿರ್ದೇಶಕರಾದ ಅಶೋಕ ಕಲಘಟಗಿ ಅವರು ಹಸಿರು ನಿಶಾನೆ ತೋರಿಸುವ ಮೂಲಕ ಜಿಲ್ಲಾ ಪಂಚಾಯತಿ ಕಾರ್ಯಾಲಯದಿಂದ ಜಾಥಾಕ್ಕೆ ಚಾಲನೆ ನೀಡಿದರು.

ಜಿಲ್ಲಾಧಿಕಾರಿಗಳ ಕಾರ್ಯಾಲಯಕ್ಕೆ ಆಗಮಿಸಿದ ಜಾಥಾವನ್ನು ಉದ್ದೇಶಿಸಿ ಅಪರ ಜಿಲ್ಲಾಧಿಕಾರಿಗಳಾದ ಡಾ.ಔದ್ರಾಮ ಅವರು ಮಾತನಾಡಿ ಯಾವುದೇ ಅರ್ಹ ಮತದಾರರು ಮತದಾನ ಹಕ್ಕಿನಿಂದ ವಂಚಿತರಾಗಬಾರದು ಹಿನ್ನೆಲೆಯಲ್ಲಿ ದಿನಾಂಕ 01–01–2026ಕ್ಕೆ 18 ವರ್ಷ ಪೂರ್ಣಗೊಳ್ಳುವ ಎಲ್ಲಾ ಅರ್ಹ ಯುವಕ–ಯುವತಿಯರು ಮತದಾರರ ಪಟ್ಟಿಗೆ ತಮ್ಮಹೆಸರು ಸೇರ್ಪಡೆ ಮಾಡುವುದು, ಮೃತಪಟ್ಟ, ಸ್ಥಳಾಂತರಗೊಂಡ ಮತದಾರರ ಹೆಸರು ತೆಗೆದು ಹಾಕುವುದು ಮತ್ತು ವಿಳಾಸ, ಇತರೆ ತಿದ್ದುಪಡಿಗಳನ್ನು ಮಾಡುವುದು. ಈ ವಿಶೇಷ ಪರಿಷ್ಕರಣೆಯ ಮುಖ್ಯ ಉದ್ದೇಶವಾಗಿದೆ ಎಂದರು. ಪ್ರಜಾಪ್ರಭುತ್ವದ ಯಶಸ್ಸು ಪ್ರತಿಯೊಬ್ಬ ಅರ್ಹ ಪ್ರಜೆಯು ಮತ ಚಲಾಯಿಸುವುದರ ಮೇಲೆ ನಿಂತಿದೆ. ದೋಷರಹಿತ ಮತದಾರರ ಪಟ್ಟಿ ಸಿದ್ಧಪಡಿಸುವುದು. 18 ವರ್ಷ ತುಂಬಿದ ಪ್ರತಿಯೊಬ್ಬರೂ ತಪ್ಪದೇ ಮತದಾರರಾಗಿ ನೋಂದಾಯಿಸಿಕೊಳ್ಳಬೇಕು ಎಂದು ಕರೆ ನೀಡಿದರು. ಗಿಂಣಜಡಿ ಊಜಟರಿಟುಟಜ ೦ಠಿಠಿ, ಓಗಿಖಿಕ ಪೋರ್ಟಲ್ ಟಿಠಿಠಿ.ಏಟ ಮತ್ತು ಮತಗಟ್ಟೆ ಮಟ್ಟದ ಅಧಿಕಾರಿಗಳ ಮೂಲಕ ಸುಲಭವಾಗಿ ಅರ್ಜಿ ಸಲ್ಲಿಸಬಹುದು ಎಂದು ತಿಳಿಸಿದರು. ನಮೂನೆ 6 – ಹೊಸ ಸೇರ್ಪಡೆ, ನಮೂನೆ 7 – ತೆಗೆದುಹಾಕುವಿಕೆ, ನಮೂನೆ 8 – ತಿದ್ದುಪಡಿ ಕುರಿತು ವಿವರಿಸಿ, ನಿಮ್ಮ ಹೆಸರು ಮತದಾರರ ಪಟ್ಟಿಯಲ್ಲಿದೆಯೇ? ಎಂದು ಪರಿಶೀಲಿಸಿಕೊಳ್ಳಿರಿ. 18 ವರ್ಷ ತುಂಬಿದ ನಿಮ್ಮ ಮನೆಯ ಮಕ್ಕಳ ಹೆಸರನ್ನು ಸೇರ್ಪಡೆಗೊಳಿಸಿ, ಮನೆ ಬದಲಾಯಿಸಿದ್ದರೆ ವಿಳಾಸ ತಿದ್ದುಪಡಿ ಮಾಡಿಕೊಳ್ಳಲು, ಮೃತಪಟ್ಟ ಕುಟುಂಬ ಸದಸ್ಯರ ಹೆಸರನ್ನು ತೆಗೆದುಹಾಕಲು ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಈ ಸೈಕಲ್ ಜಾಥಾವು ಜಿಲ್ಲಾ ಪಂಚಾಯತಿ ಕಾರ್ಯಾಲಯದಿಂದ ಆರಂಭವಾಗಿ, ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣ, ಜಿಲ್ಲಾಧಿಕಾರಿಗಳ ಕಚೇರಿ,ಗಾಂಧಿ ಚೌಕ, ಸಿದ್ಧೇಶ್ವರ ದೇವಸ್ಥಾನ, ಬಸವೇಶ್ವರ ಚೌಕ ಮೂಲಕ ಗೋಳಗುಮ್ಮಟ ವರೆಗೂ ಸಾಗಿ ಸಮಾವೇಶಗೊಂಡಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತಿಯ ಮುಖ್ಯ ಲೆಕ್ಕಾಧಿಕಾರಿಗಳಾದ ರಾಮಣ್ಣ ಅಥಣಿ, ಯೋಜನಾ ನಿರ್ದೇಶಕರಾದ ಅಶೋಕ ಕಲಘಟಗಿ, ಸಹಾಯಕ ಯೋಜನಾಧಿಕಾರಿ ಅರುಣಕುಮಾರ ದಳವಾಯಿ ಸೇರಿದಂತೆ ಜಿಲ್ಲಾ ಸ್ವೀಪ್ ಸಮಿತಿಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಜರಿದ್ದರು.

# 2028 ಕ್ಕೆ ಬಿಜೆಪಿ ಅಭ್ಯರ್ಥಿ ಶಾಸಕರಾಗುವುದು ಪಕ್ಕಾ

## ನೂತನ ಅಧ್ಯಕ್ಷ ವೆಂಕಟೇಶ್ ವಿಶ್ವಾಸ, ಶಾಸಕ ಅನಿಲ್ ಚಿಕ್ಕಮಾದು ವಿರುದ್ಧ ವಾಗ್ದಾಳಿ

■ ಉದಯರ ಶ್ಮಿ ದಿನಪತ್ರಿಕೆ



ಎಚ್ ಡಿ ಕೋಟೆ: 2028 ವಿಧಾನಸಭೆ ಚುನಾವಣೆಯಲ್ಲಿ ಹೆಚ್ ಡಿ ಕೋಟೆ ವಿಧಾನಸಭಾ ಕ್ಷೇತ್ರದಿಂದ ಬಿಜೆಪಿಯಿಂದ ಅಭ್ಯರ್ಥಿ ಕಣಕ್ಕಿಳಿಯೋದು ಪಕ್ಕಾ, ಶಾಸಕರಾಗೋದು ಅಷ್ಟೇ ಸತ್ಯ, ಇದರಲ್ಲಿ ಯಾವುದೇ ಅನುಮಾನ ಬೇಡ ಎಂದು ತಾಲೂಕು ಬಿಜೆಪಿ ಮಂಡಲದ ನೂತನ ಅಧ್ಯಕ್ಷ ವೆಂಕಟೇಶ್ ಹೇಳಿದರು.

ಪಟ್ಟಣದ ಪ್ರವಾಸಿಮಂದಿರದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಪಕ್ಷ ನನಗೆ ಜವಾಬ್ದಾರಿ ಕೊಟ್ಟಿದ್ದು, ಅದನ್ನು ಸಮರ್ಥವಾಗಿ ನಿಭಾಯಿಸಿಕೊಂಡು ಹೋಗುತ್ತೇನೆ. ತಳಮಟ್ಟದಿಂದ ಪಕ್ಷ ಸಂಘಟಿಸಲು ಪ್ರತಿ ಹಳ್ಳಿ ಹಳ್ಳಿಗೂ ಭೇಟಿ ನೀಡಿ ಕಾರ್ಯಕರ್ತರ ಕುಂದು ಕೊರತೆ ಆಲಿಸಿ, ಅವನ್ನು ವಿಶ್ವಾಸಕ್ಕೆ ತೆಗೆದುಕೊಂಡು ಹೋಗುತ್ತೇನೆ. ಮುಂಬರುವ ವಿಧಾನಸಭೆ ಚುನಾವಣೆಯ ಗೆಲುವಿನ ಮೆಟ್ಟಿಲು ಆಗಿರುವ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ನಮ್ಮ ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಕಳೆದ ವಿಧಾನಸಭೆ ಚುನಾವಣೆಯಲ್ಲಿ ನಮ್ಮ ಪಕ್ಷ 50 ಸಾವಿರ ಮತ ಪಡೆದು ಎರಡನೇ ಸ್ಥಾನಕ್ಕೆ ಬಂದಿತ್ತು. ಹೀಗಾಗಿ 2028 ವಿಧಾನಸಭೆ ಚುನಾವಣೆಯಲ್ಲಿ ನಮ್ಮ ಪಕ್ಷದಿಂದ ಅಭ್ಯರ್ಥಿ ಚುನಾವಣೆಯಲ್ಲಿ ಸ್ಪರ್ಧಿಸೋದು ಪಕ್ಕಾ. ಇದರಲ್ಲಿ ಅನುಮಾನವೇ ಬೇಡ.

> "ಕ್ಷೇತ್ರದ ಸಾಮಾನ್ಯ ಜನರಿಗೆ ಶಾಸಕ ಅನಿಲ್ ಚಿಕ್ಕಮಾದು ಸಿಗುತ್ತಿಲ್ಲ. ಅವರನ್ನು ಭೇಟಿ ಮಾಡಲು ವಾಹನ ಮಾಡಿಕೊಂಡು ಮೈಸೂರಿಗೆ ಹೋಗಬೇಕಾಗಿದೆ. ಕೆಲಸ ಕಾರ್ಯಬಿಟ್ಟು ಅವರ ಭೇಟಿಗೆ ಕ್ಯೂನಲ್ಲಿ ನಿಲ್ಲಬೇಕಾಗಿದೆ. ಇದನ್ನು ನೋಡಿದರೆ ಇವರು ಹೆಚ್ ಡಿ ಕೋಟೆ ಕ್ಷೇತ್ರ ಶಾಸಕರಾ ಅಥವಾ ಮೈಸೂರು ಶಾಸಕರಾ ಎಂಬ ಗೊಂದಲ ಜನರಲ್ಲಿ ಶುರುವಾಗಿದೆ."
>
> ■ ಸೋಮೇಶ್ ಭೀಮನಹಳ್ಳಿ
> ತಾಲೂಕು ಬಿಜೆಪಿ ವಕ್ತಾರರು

ಶಾಸಕ ಅನಿಲ್ ಚಿಕ್ಕಮಾದು 8 ವರ್ಷಗಳ ಸಾಧನೆ ಶೂನ್ಯ. ವರ್ಗಾವಣೆ ದಂಧೆಯಲ್ಲಿ ನಿರತರಾಗಿದ್ದರೋ ಹೊರತು ಯಾವುದೇ ಅಭಿವೃದ್ಧಿ ಕೆಲಸ ಮಾಡಿಲ್ಲ. ತಾಲೂಕು ಕಚೇರಿ ಸೇರಿದಂತೆ ಎಲ್ಲ ಕಡೆ ಲಂಚಾವತಾರ ತಾಂಡವಾಡುತ್ತಿದ್ದು, ರೈತರ ಸ್ಥಿತಿ ಹೇಳತೀರದಾಗಿದೆ. ರಾಜ್ಯ ಸರ್ಕಾರ ಹಾಗೂ ಶಾಸಕ ಅನಿಲ್ ಚಿಕ್ಕಮಾದು ಅವರ ಕಾರ್ಯವೈಖರಿ ವೈಫಲ್ಯ ಮುಂದಿಟ್ಟುಕೊಂಡು ಜನರ ಬಳಿ ಹೋಗುತ್ತೇವೆ. ಬೀದಿಗಿಳಿದು ಪ್ರತಿಭಟನೆ ಮಾಡುತ್ತೇವೆ. ತಂದೆ ಸಾವಿನ ಅನುಕಂಪದಿಂದ ಗೆದ್ದಿರುವ ಶಾಸಕರ ಬಂಡವಾಳ ಬಯಲು ಮಾಡುತ್ತೇನೆ ಎಂದು ವೆಂಕಟೇಶ್ ಗುಡುಗಿದರು.

ಈ ವೇಳೆ ತಾಲೂಕು ಬಿಜೆಪಿ ಪ್ರಧಾನ ಕಾರ್ಯದರ್ಶಿಗಳಾದ ರಾಜು ಬಿಡಗಲು, ಗುರುಸ್ವಾಮಿ, ಮೊತ್ತ ಬಸವರಾಜಪ್ಪ, ತಾಲೂಕು ಬಿಜೆಪಿ ವಕ್ತಾರ ಸೋಮೇಶ್ ಭೀಮನಹಳ್ಳಿ, ಸೋಮಾಚಾರ್, ಚಂದ್ರಮೌಳೇಶ್ವರ, ರವೀಂದ್ರ ಮಲಾರ, ಜವರಯ್ಯ ಮತ್ತು ಮಂಜುನಾಥ್ ಇದ್ದರು.

# ಯರನಾಳ ಗ್ರಾಪಂಗೆ ಉಪ ಕಾರ್ಯದರ್ಶಿ ಪ್ರಕಾಶ ವಡ್ಡರ ಭೇಟಿ

## ಗ್ರಾಮೀಣ ಅಭಿವೃದ್ಧಿ ಕಾರ್ಯಗಳ ಪರಿಶೀಲನೆ | ಸ್ವಚ್ಛತೆ-ಮೂಲಸೌಕರ್ಯ ಹಾಗೂ ಉದ್ಯೋಗ ಸೃಜನೆಗೆ ಆದ್ಯತೆ ನೀಡಲು ಸೂಚನೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜು.1ರಂದು ಬಸವನ ಬಾಗೇವಾಡಿ ತಾಲೂಕಿನ ಯರನಾಳ ಗ್ರಾಮ ಪಂಚಾಯಿತಿಗೆ ಜಿಲ್ಲಾ ಪಂಚಾಯತಿಯ ಉಪ ಕಾರ್ಯದರ್ಶಿಗಳಾದ ಪ್ರಕಾಶ ವಡ್ಡರ ಅವರು ಭೇಟಿ ನೀಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಿವಿಧ ಕಾಮಗಾರಿಗಳನ್ನು ಹಾಗೂ ಸಾರ್ವಜನಿಕ ಸೌಲಭ್ಯಗಳ ಕುರಿತು ಪರಿಶೀಲನೆ ನಡೆಸಿದರು.ಗ್ರಾಮದ ಕೃಷಿ ಮಾರುಕಟ್ಟೆಗೆ ತೆರಳಿ ಅಲ್ಲಿನ ಗೋದಾಮು ಹಾಗೂ ಮಳಿಗೆಗಳನ್ನು ವೀಕ್ಷಿಸಿದರು.

ಸಾರ್ವಜನಿಕರಿಗೆ ಉತ್ತಮ ವಾತಾವರಣ ಕಲ್ಪಿಸುವ ನಿಟ್ಟಿನಲ್ಲಿ ಮಾರುಕಟ್ಟೆ ಪ್ರದೇಶದಲ್ಲಿ ಸ್ವಚ್ಛತೆ ಕಾಪಾಡಿಕೊಳ್ಳುವುದು ಅತ್ಯಂತ ಮುಖ್ಯವಾಗಿದ್ದು, ಸ್ವಚ್ಛತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಗ್ರಾಮ ಪಂಚಾಯಿತಿ ಕಚೇರಿಗೆ ಭೇಟಿ ನೀಡಿ ಪಂಚಾಯಿತಿಯ ಆಡಳಿತಾತ್ಮಕ ಕಾರ್ಯಗಳ ಪ್ರಗತಿ ಪರಿಶೀಲನೆ ನಡೆಸಿದರು. ಗ್ರಾಮ ಪಂಚಾಯಿತಿಯ ತೆರಿಗೆ ವಸೂಲಾತಿಯನ್ನು ಹೆಚ್ಚಿಸುವ ಮೂಲಕ ಪಂಚಾಯಿತಿಯ ಆದಾಯವನ್ನು ಸದೃಢಗೊಳಿಸಬೇಕು ಎಂದು ಬಿಲ್ ಕಲೆಕ್ಟರ್‌ಗಳಿಗೆ ಸೂಚನೆ ನೀಡಿದರು. ಗ್ರಾಮ ಸ್ವಚ್ಛತೆ, ಕುಡಿಯುವ ನೀರು ಸೇರಿದಂತೆ ಸಾರ್ವಜನಿಕ ಮೂಲಸೌಕರ್ಯಗಳ ನಿರ್ವಹಣೆಗೆ ಹೆಚ್ಚಿನ ಗಮನಹರಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯತಿಯ ಯೋಜನಾಧಿಕಾರಿಗಳಾದ ಎಮ್. ಬಿ. ಸೊನ್ನದ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಜ್ಯೋತಿ ಶೇಗಾವಿ, ಗ್ರಾಮ ಪಂಚಾಯತ್ ಸಿಬ್ಬಂದಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## ತಿಕೋಟಾ ತಾಲೂಕಿನ ಕೋಟ್ಯಾಳ ಗ್ರಾಮದಲ್ಲಿ ರೂ.3.25 ಕೋಟಿ ವೆಚ್ಚದಲ್ಲಿ ನಿರ್ಮಿಸಿದ ಪ್ರೌಢಶಾಲೆ ಕಟ್ಟಡ

# ಇಂದು ಸಚಿವ ಎಂ.ಬಿ.ಪಾಟೀಲ ರಿಂದ ನೂತನ ಶಾಲಾ ಕಟ್ಟಡ ಉದ್ಘಾಟನೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲೆಯ ತಿಕೋಟಾ ತಾಲೂಕಿನ ಕೋಟ್ಯಾಳ ಗ್ರಾಮದಲ್ಲಿ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರತಿಷ್ಠಾನ (KIAF) ಮತ್ತು ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಲಿಮಿಟೆಡ್ (BIAL) ಅವರ ಸಿ.ಎಸ್.ಆರ್ ಅನುದಾನದಡಿ ನಿರ್ಮಿಸಲಾದ ಸುಸಜ್ಜಿತ ನೂತನ ಸರಕಾರಿ ಪ್ರೌಢ ಶಾಲಾ ಕಟ್ಟಡದ ಉದ್ಘಾಟನೆ ದಿ.3 ಶುಕ್ರವಾರರಂದು ಬೆ.11ಗಂ. ನಡೆಯಲಿದೆ.

ನೂತನ ಶಾಲಾ ಕಟ್ಟಡವನ್ನು ಕೈಗಾರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ. ಬಿ. ಪಾಟೀಲ ಅವರು ಲೋಕಾರ್ಪಣೆಗೊಳಿಸಲಿದ್ದಾರೆ.

ಸಮಾರಂಭದ ಅತಿಥಿಗಳಾಗಿ ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಹರಿ ಮರಾರ, ಮುಖ್ಯ ಹಣಕಾಸು ಅಧಿಕಾರಿ ಭಾಸ್ಕರ ಆನಂದರಾವ್, ಅನೀಲಕುಮಾರ ಪಾಟೀಲ ಹಾಗೂ ತಂಡದವರು ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

ಈ ನೂತನ ಕಟ್ಟಡ ಒಟ್ಟು 3.25 ಕೋಟಿ ವೆಚ್ಚದಲ್ಲಿ 7,000 ಚದರ ಅಡಿ ವಿಸ್ತೀರ್ಣದ ಸುಸಜ್ಜಿತ ಶಾಲಾ ಕಟ್ಟಡ ನಿರ್ಮಾಣ ಮತ್ತು 800 ಚದರ ಅಡಿ ಹಳೆಯ ಕಟ್ಟಡದ ಪುನರುಜ್ಜೀವನ ಕಾರ್ಯವನ್ನು ಪೂರ್ಣಗೊಳಿಸಲಾಗಿದೆ. 1 ರಿಂದ 10 ನೇ ತರಗತಿವರೆಗಿನ ವಿದ್ಯಾರ್ಥಿಗಳಿಗಾಗಿ ಏಳು ಸುಸಜ್ಜಿತ ತರಗತಿ ಕೊಠಡಿಗಳನ್ನು ನಿರ್ಮಿಸಲಾಗಿದೆ. ನಾವೀನ್ಯತೆ ಮತ್ತು ಚಟುವಟಿಕೆ ಆಧಾರಿತ ಕಲಿಕೆಗಾಗಿ 'ಖಿಳಿಇಒ ಲ್ಯಾಬ್' ಹಾಗೂ 'ನಲಿ–ಕಲಿ' ಕೊಠಡಿಗಳನ್ನು ಸ್ಥಾಪಿಸಲಾಗಿದೆ. ಶಾಲೆಯಲ್ಲಿ 135 ಹೊಸ ಪೀಠೋಪಕರಣಗಳು, ಬಾಲಕ–ಬಾಲಕಿಯರಿಗೆ 10 ಸುಸಜ್ಜಿತ ಶೌಚಾಲಯ ಮತ್ತು ಸುಸಜ್ಜಿತ ಅಡುಗೆ ಮನೆ ಹಾಗೂ ಊಟದ ಸಭಾಂಗಣವನ್ನು ನಿರ್ಮಿಸಲಾಗಿದೆ.

ಈ ಸುಸಜ್ಜಿತ ಶಾಲಾ ಕಟ್ಟಡವು ಕೋಟ್ಯಾಳ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ನೂರಾರು ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಮತ್ತು ಆಧುನಿಕ ಕಲಿಕಾ ವಾತಾವರಣವನ್ನು ಒದಗಿಸಲಿದೆ ಎಂದು ಸಚಿವರ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

# ಗ್ರಾಮ ಪಂಚಾಯತ ಮೀಸಲು ನಿಗದಿಪಡಿಸಿದ ಸರ್ಕಾರ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಅವಧಿ ಪೂರ್ಣಗೊಂಡ ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತಿಗಳಿಗೆ ಗ್ರಾಮ ಪಂಚಾಯತಿಗಳ ಸಾರ್ವತ್ರಿಕ ಚುನಾವಣೆ ಹಿನ್ನೆಲೆಯಲ್ಲಿ ಚುನಾವಣಾ ಕ್ಷೇತ್ರಕ್ಕೆ ವಿವಿಧ ವರ್ಗಗಳ ಸ್ಥಾನಗಳನ್ನು ಮೀಸಲಿರಿಸಿ ಸರ್ಕಾರ ಅಧಿಸೂಚನೆ ಹೊರಡಿಸಿದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 5 ರಂತೆ ಗ್ರಾಮ ಪಂಚಾಯತಿ ವ್ಯಾಪ್ತಿಯ ಅಧೀನಕ್ಕೆ ಒಳಪಡುವ ಪ್ರದೇಶಗಳನ್ನು ಪ್ರಾದೇಶಿಕ ಚುನಾವಣಾ ಕ್ಷೇತ್ರಗಳಾಗಿ ವಿಭಜಿಸಿ, ಕೋಷ್ಟಕ–1 ಮತ್ತು ಕೋಷ್ಟಕ–2ರಲ್ಲಿ ಪ್ರಾದೇಶಿಕ ಚುನಾವಣಾ ಕ್ಷೇತ್ರಕ್ಕೆ ವಿವಿಧ ವರ್ಗಗಳ ಸ್ಥಾನಗಳನ್ನು ಮೀಸಲು ನಿಗದಿಪಡಿಸಿದ್ದನ್ನು ರಾಜ್ಯ ಪತ್ರದಲ್ಲಿ ಪ್ರಕಟಿಸಿದೆ.

ಈ ವಿಷಯವನ್ನು ಸಂಬಂಧಿಸಿದ ತಾಲೂಕುಗಳ ತಹಶೀಲದಾರ ಕಚೇರಿ, ತಾಲೂಕು, ಗ್ರಾಮ ಪಂಚಾಯತಿಗಳಲ್ಲಿ ಪ್ರಕಟಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

# ಜು.6 ರಂದು ಫೋನ್–ಇನ್ ಕಾರ್ಯಕ್ರಮ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಮೂಲಕ ಪ್ರಯಾಣಿಕರ ಅನುಕೂಲಕ್ಕಾಗಿ ಅಹವಾಲು ಮತ್ತು ಕುಂದು–ಕೊರತೆಗಳನ್ನು ಆಲಿಸಲು ಜುಲೈ.6ರ ಸೋಮವಾರ ಮಧ್ಯಾಹ್ನ 3.30 ರಿಂದ 4.30ರವರೆಗೆ ಫೋನ್–ಇನ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ದೂರವಾಣಿ 6366423887 ಸಂಖ್ಯೆಗೆ ಸಾರ್ವಜನಿಕರು ಕರೆ ಮಾಡಿ, ತಮ್ಮ ಕುಂದು–ಕೊರತೆಗಳನ್ನು ಪರಿಹರಿಸಿಕೊಳ್ಳಬಹುದಾಗಿದ್ದು ಸಾರ್ವಜನಿಕರು ಫೋನ್–ಇನ್ ಕಾರ್ಯಕ್ರಮದಲ್ಲಿ ಭಾಗವಹಿಸಿ,ಸದುಪಯೋಗ ಪಡೆದುಕೊಳ್ಳಬೇಕೆಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿಗಳ ಪ್ರಕಟಣೆ ತಿಳಿಸಿದೆ




## ರಾಷ್ಟ್ರೀಯ ವೈದ್ಯರ ದಿನಾಚರಣೆಯಲ್ಲಿ ಐ.ಎಮ್.ಎ ಶಸ್ತ್ರಚಿಕಿತ್ಸಕಿ ಡಾ.ಸಂಧ್ಯಾ ಶಾಂತವೀರ ಮನಗೂಳಿ ಅಭಿಮತ

# ರೋಗಿಗಳ ಜೀವ ಉಳಿಸುವಲ್ಲಿ ವೈದ್ಯರ ಪಾತ್ರ ಅತ್ಯಂತ ಮಹತ್ವದ್ದು

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಸಮಾಜದ ಆರೋಗ್ಯ ಕಾಪಾಡುವಲ್ಲಿ ವೈದ್ಯರ ಸೇವೆ ಅಮೂಲ್ಯವಾಗಿದ್ದು, ಅವರ ತ್ಯಾಗ, ಸಮರ್ಪಣೆ ಮತ್ತು ಮಾನವೀಯ ಸೇವೆಯನ್ನು ಪ್ರತಿಯೊಬ್ಬರೂ ಗೌರವಿಸಬೇಕು ಎಂದು ಮಹಿಳಾ ಪ್ರತಿನಿಧಿ, ಐ.ಎಮ್.ಎ ಶಸ್ತ್ರಚಿಕಿತ್ಸಕರಾದ ಡಾ.ಸಂಧ್ಯಾ ಶಾಂತವೀರ ಮನಗೂಳಿ ಹೇಳಿದರು.

ಸಿಂದಗಿ ನಗರದ ತಾಲೂಕು ಶಿಕ್ಷಣ ಪ್ರಸಾರಕ ಮಂಡಳಿಯ ಶಾಂತವೀರ ಪಟ್ಟಾಧ್ಯಕ್ಷರ ಕನ್ಯಾ ಪ್ರೌಢಶಾಲೆ ಹಾಗೂ ಭಾರತೀಯ ವೈದ್ಯಕೀಯ ಸಂಘದ ಸಹಯೋಗದಲ್ಲಿ ಹಮ್ಮಿಕೊಂಡ ರಾಷ್ಟ್ರೀಯ ವೈದ್ಯರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಭಾರತದ ಖ್ಯಾತ ವೈದ್ಯರು ಹಾಗೂ ಪಶ್ಚಿಮ ಬಂಗಾಳದ ಮಾಜಿ ಸಿಎಂ ಡಾ.ಬಿಧಾನ್ ಚಂದ್ರರಾಯ್ ಅವರ ಜನ್ಮದಿನ ಹಾಗೂ ಪುಣ್ಯತಿಥಿಯ ಸ್ಮರಣಾರ್ಥ ರಾಷ್ಟ್ರೀಯ ವೈದ್ಯರ ದಿನವನ್ನು ಆಚರಿಸಲಾಗುತ್ತದೆ. ವೈದ್ಯಕೀಯ ಕ್ಷೇತ್ರಕ್ಕೆ ಅವರು ನೀಡಿದ ಅಮೂಲ್ಯ ಕೊಡುಗೆಯನ್ನು ಗೌರವಿಸುವ ಸಲುವಾಗಿ ಭಾರತ ಸರ್ಕಾರ ಈ ದಿನವನ್ನು ರಾಷ್ಟ್ರೀಯ ವೈದ್ಯರ ದಿನವಾಗಿ ಘೋಷಿಸಿದೆ. ರೋಗಿಗಳ ಜೀವ ಉಳಿಸುವಲ್ಲಿ ವೈದ್ಯರು ವಹಿಸುವ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಸಾಂಕ್ರಾಮಿಕ ರೋಗಗಳು, ತುರ್ತು ಪರಿಸ್ಥಿತಿಗಳು ಹಾಗೂ ಪ್ರಕೃತಿ ವಿಕೋಪಗಳಂತಹ ಸಂಕಷ್ಟದ ಸಮಯದಲ್ಲಿಯೂ ವೈದ್ಯರು ತಮ್ಮ ಜೀವದ ಹಂಗು ತೊರೆದು ಜನರ ಆರೋಗ್ಯ ಕಾಪಾಡಲು ಶ್ರಮಿಸುತ್ತಾರೆ. ಅವರ ಸೇವೆ ಸಮಾಜಕ್ಕೆ ಸದಾ ಆದರ್ಶಪ್ರಾಯವಾಗಿದೆ ಎಂದರು.

ಈ ವೇಳೆ ಭಾರತೀಯ ವೈದ್ಯಕೀಯ ಸಂಘದ ಕಾರ್ಯಕಾರಿ ಸದಸ್ಯೆ ಡಾ.ಶಾರದಾ ನಾಡಗೌಡ ಮಾತನಾಡಿ, ಸಮಾಜದ ಆರೋಗ್ಯ ರಕ್ಷಣೆ ಮತ್ತು ಜೀವ ಉಳಿಸುವ ಮಹತ್ತರ ಜವಾಬ್ದಾರಿಯನ್ನು ಹೊತ್ತಿರುವ ವೈದ್ಯರು ಹಗಲು–ರಾತ್ರಿ ಎನ್ನದೆ ಸೇವೆ ಸಲ್ಲಿಸುತ್ತಿದ್ದಾರೆ. ತುರ್ತು ಪರಿಸ್ಥಿತಿಗಳು, ಸಾಂಕ್ರಾಮಿಕ ರೋಗಗಳು ಹಾಗೂ ಪ್ರಕೃತಿ ವಿಕೋಪಗಳ ಸಂದರ್ಭದಲ್ಲಿಯೂ ವೈದ್ಯರು ತಮ್ಮ ಕರ್ತವ್ಯವನ್ನು ನಿಷ್ಠೆಯಿಂದ ನಿರ್ವಹಿಸಿ ಜನರ ಆರೋಗ್ಯ ಕಾಪಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತಾರೆ ಎಂದರು.

ಇದೇ ಸಂದರ್ಭದಲ್ಲಿ ಶಾಲೆಯ ಮುಖ್ಯೋಪಾಧ್ಯಾಯ ಎಸ್.ಆರ್.ನಾಯಕ ಮಾತನಾಡಿದರು.

ಇದೇ ಸಂದರ್ಭದಲ್ಲಿ ಭಾರತೀಯ ವೈದ್ಯಕೀಯ ಸಂಘದ ಕಾರ್ಯದರ್ಶಿ ಡಾ.ಸಂಗಮೇಶ ಪಾಟೀಲ ಶಿಕ್ಷಕರಾದ ಆರ್.ವೈ.ಪರಿಟ್, ಎಸ್.ಎಸ್.ಹತ್ತಿ ಎಸ್.ವಿ.ಮಿರ್ಜಿಕರ್ ದಾನಮ್ಮ ಗಣಾಚಾರಿ, ಸಾಗರ ರಾಥೋಡ, ಸುನೀಲ ನಾಗಾವಿ, ರಾಜು ಎಮ್ಮಿ ಸೇರಿದಂತೆ ಶಾಲೆಯ ಬೋಧಕ–ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಇದ್ದರು.

## ಮತದಾರರಿಗೆ ಎನ್ಯೂಮರೇಷನ್ ಫಾರ್ಮ್ ಎರಡು ಪ್ರತಿಗಳಲ್ಲಿ ವಿತರಣೆ :ತಹಶೀಲ್ದಾರ್ ಬೆಳ್ಳಿ

# ಮತಗಟ್ಟೆ ಮಟ್ಟದ ಅಧಿಕಾರಿಗಳಿಂದ ಮನೆ ಮನೆಗೆ ಭೇಟಿ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಸಿಂದಗಿ ವಿಧಾನಸಭಾ ಮತಕ್ಷೇತ್ರದ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ–2026 (ಎಸ್ಐಆರ್) ಕಾರ್ಯ ಆರಂಭಗೊಂಡಿದ್ದು, ಜೂ.30 ರಿಂದ ಜುಲೈ 29ರವರೆಗೆ ಮತಗಟ್ಟೆ ಮಟ್ಟದ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ಮತದಾರರಿಗೆ ಎನ್ಯೂಮರೇಷನ್ ಫಾರ್ಮನ್ನು ಎರಡು ಪ್ರತಿಗಳಲ್ಲಿ ವಿತರಿಸುತ್ತಿದ್ದಾರೆ. ಸಿಂದಗಿ ವಿಧಾನಸಭಾ ಕ್ಷೇತ್ರದಲ್ಲಿ ಪ್ರಸ್ತುತ ಒಟ್ಟು 2,50,761 ಮತದಾರರು ಇದ್ದು, ಇವರಲ್ಲಿ 1,27,387 ಪುರುಷರು, 1,23,340 ಮಹಿಳೆಯರು ಹಾಗೂ 34 ತೃತೀಯ ಲಿಂಗದ ಮತದಾರರು ಸೇರಿದ್ದಾರೆ. ಮತಗಟ್ಟೆ ಮಟ್ಟದ ಅಧಿಕಾರಿಗಳು ವಿತರಿಸುವ ಎನ್ಯೂಮರೇಷನ್ ಫಾರ್ಮ್ಗಳನ್ನು ಮತದಾರರು ಸಂಪೂರ್ಣವಾಗಿ ಭರ್ತಿ ಮಾಡಿ, ಅಗತ್ಯ ದಾಖಲೆಗಳೊಂದಿಗೆ ಸಂಬಂಧಿಸಿದ ಃಐಔಗಳಿಗೆ ನಿಗದಿತ ಅವಧಿಯೊಳಗೆ ಹಿಂದಿರುಗಿಸುವಂತೆ ಸಹಾಯಕ ಮತದಾರರ ನೋಂದಣಾಧಿಕಾರಿ ಹಾಗೂ ತಹಶೀಲ್ದಾರ್ ಕರೆಪ್ಪ ಬೆಳ್ಳಿ ಮನವಿ ಮಾಡಿದ್ದಾರೆ.

ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ–2026 ಕುರಿತು ಹೆಚ್ಚಿನ ಮಾಹಿತಿಯನ್ನು ಗಿಂಣಜಢಿ ಖಜಡಿತುಥಿಜ ಕಠಡಿಣಚಿಟ, ಮುಖ್ಯ ಚುನಾವಣಾಧಿಕಾರಿಗಳ ಕರ್ನಾಟಕ ವೆಬ್‌ಸೈಟ್ ಹಾಗೂ ವಿಜಯಪುರ ಜಿಲ್ಲಾ ವೆಬ್ ಪೋರ್ಟಲ್ ಮೂಲಕ ಪಡೆಯಬಹುದು. ಹೆಚ್ಚಿನ ಮಾಹಿತಿ ಮತ್ತು ಸಲಹೆಗಾಗಿ ಸಿಂದಗಿ ತಾಲ್ಲೂಕು ಮತದಾರರ ಸಹಾಯವಾಣಿ 08488–221235 ಹಾಗೂ ಆಲಮಲ ತಾಲ್ಲೂಕು ಮತದಾರರ ಸಹಾಯವಾಣಿ 08488–200322 ಸಂಪರ್ಕಿಸಬಹುದಾಗಿದೆ. ಈ ವಿಶೇಷ ಪರಿಷ್ಕರಣೆ ಕಾರ್ಯದಲ್ಲಿ ಕ್ಷೇತ್ರದ ಎಲ್ಲಾ ಮತದಾರರು ಸಕ್ರಿಯವಾಗಿ ಭಾಗವಹಿಸಿ, ಮತದಾರರ ಪಟ್ಟಿಯನ್ನು ನಿಖರಗೊಳಿಸಲು ಸಹಕರಿಸುವಂತೆ ಸಹಾಯಕ ಮತದಾರರ ನೋಂದಣಾಧಿಕಾರಿಗಳು ಹಾಗೂ ತಹಶೀಲ್ದಾರ್ ಕರೆಪ್ಪ ಬೆಳ್ಳಿ ಮನವಿ ಮಾಡಿದ್ದಾರೆ.

# ದೇಶ ವಿಕಸಿತ ಭಾರತ ಆಗಲು ಕೈ ಜೋಡಿಸಿ :ಸಂಜಯ ಪಾಟೀಲ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಕೇಂದ್ರ ಸಹಕಾರ ಸಚಿವಾಲಯ ಸ್ಥಾಪನೆಯಾಗಿ 05 ವರ್ಷಗಳನ್ನು ಪೂರೈಸುತ್ತಿರುವ ಹಿನ್ನೆಲೆಯಲ್ಲಿ 'ಸಹಕಾರದಿಂದ ಸಮೃದ್ಧಿ' ಎಂಬ ಧ್ಯೇಯ ವಾಕ್ಯದೊಂದಿಗೆ, ಜೂ.01 ರಂದು ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರು, ವಿಜಯಪುರ ಸೌಹಾರ್ದ ಸಹಕಾರಿಗಳ ಒಕ್ಕೂಟ ನಿ., ವಿಜಯಪುರ ಹಾಗೂ ಶಾಂತಿನಿಕೇತನ ಶಿಕ್ಷಣ ಸಂಸ್ಥೆ, ವಿಜಯಪುರ ಇವರುಗಳ ಸಹಯೋಗದೊಂದಿಗೆ "ಸಹಕಾರ ವಿಚಾರ ಸಂಕೀರ್ಣ" ಕಾರ್ಯಕ್ರಮವನ್ನು ಶಾಂತಿನಿಕೇತನ ಕಾಲೇಜು ಭವನದಲ್ಲಿ ಆಯೋಜಿಸಲಾಗಿತ್ತು.

ಕಾರ್ಯಕ್ರಮದ ಉದ್ಘಾಟನೆಯನ್ನು ಸುರೇಶ ಬಿರಾದಾರ, ಅಧ್ಯಕ್ಷರು ಶಾಂತಿನಿಕೇತನ ಶಿಕ್ಷಣ ಸಂಸ್ಥೆ ಇವರು ನೆರವೇರಿಸಿದರು. ಅಧ್ಯಕ್ಷತೆಯನ್ನು ಸಂಯುಕ್ತ ಸಹಕಾರಿಯ ನಿರ್ದೇಶಕ ಸಂಜಯ ಪಾಟೀಲ ವಹಿಸಿದ್ದರು.

ಅತಿಥಿಗಳಾಗಿ ವಿಜಯಪುರ ಸೌಹಾರ್ದ ಸಹಕಾರಿಗಳ ಒಕ್ಕೂಟ ನಿ. ಉಪಾಧ್ಯಕ್ಷ ಚಂದ್ರಶೇಖರ ಕವಟಗಿ, ಹಾಗೂ ಒಕ್ಕೂಟದ ನಿರ್ದೇಶಕರಾದ ಸಿದ್ದು ಮಲ್ಲಿಕಾರ್ಜುನ ಮಠ, ಅರುಣ ಎಸ್. ಮಠ, ಅರುಣ ಆರ್. ವಾರದ ಉಪಸ್ಥಿತ–ರಿದ್ದರು.

ಸಹಕಾರ ಕ್ಷೇತ್ರದ ಪರಿಚಯ ಮತ್ತು ಕಾರ್ಯವೈಖ–ರಿಗಳು ವಿಷಯದ ಕುರಿತು ಸಂಪನ್ಮೂಲ ವ್ಯಕ್ತಿ ಆರ್.ಎಮ್. ಬಣಕಾರ, ನಿವೃತ್ತ ಉಪಪ್ರಧಾನ ವ್ಯವಸ್ಥಾಪಕರು, ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ನಿ., ವಿಜಯಪುರ ಇವರು ಉಪನ್ಯಾಸ ನೀಡಿದರು.

ಕಾರ್ಯಕ್ರಮದ ನಿರೂಪಣೆಯನ್ನು ಒಕ್ಕೂಟದ ಮುಖ್ಯಕಾರ್ಯನಿರ್ವಾಹಕರಾದ ಪಂಪನಗೌಡ ಪಾಟೀಲ ನಡೆಸಿಕೊಟ್ಟರು. ಪ್ರಾರ್ಥನೆಯನ್ನು ಕು.ಪೂನಂ ಮತ್ತು ಕು.ಪಲ್ಲವಿ ನಡೆಸಿದರು. ಸ್ವಾಗತವನ್ನು ಅರುಣ ಆರ್. ವಾರದ ಕೋರಿದರು.

ಪ್ರಾಸ್ತಾವಿಕವನ್ನು ಚಂದ್ರಶೇಖರ ಕವಟಗಿ ನುಡಿದರು. ವಂದನಾರ್ಪಣೆಯನ್ನು ಸೌಹಾರ್ದ ಅಭಿವೃದ್ಧಿ ಅಧಿಕಾರಿ ಬಸವರಾಜ ಎಸ್ ನಡೆಸಿಕೊಟ್ಟರು.

ಕಾರ್ಯಕ್ರಮದಲ್ಲಿ ಜಿಲ್ಲೆಯ ಸೌಹಾರ್ದ ಸಹಕಾ–ರಿಗಳು ಮತ್ತು ಶಾಂತಿನಿಕೇತನ ಶಿಕ್ಷಣ ಸಂಸ್ಥೆಯ ವಾಣಿಜ್ಯ ವಿಭಾಗದ ವಿದ್ಯಾರ್ಥಿಗಳು ಸೇರಿದಂತೆ ಪ್ರತಿನಿಧಿಗಳು ಭಾಗವಹಿಸಿದ್ದರು.

# ಡಾ.ಕಡ್ಲಿಮಟ್ಟಿ ಗೆ ಅತ್ಯುತ್ತಮ ಆಯುರ್ವೇದ ವೈದ್ಯ ಪ್ರಶಸ್ತಿ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಎ.ವಿ.ಎಸ್ ಆಯುರ್ವೇದ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನ ಕೇಂದ್ರದಲ್ಲಿರುವ ನಗರ ಆರೋಗ್ಯ ಕೇಂದ್ರ ಮತ್ತು ಹೈಟೆಕ್ ಆಯುರ್ವೇದ ಆಸ್ಪತ್ರೆಯ ಆಡಳಿತಾಧಿಕಾರಿ ಡಾ. ಸಂಜಯ ಕಡ್ಲಿಮಟ್ಟಿ ಅವರಿಗೆ ಅತ್ಯುತ್ತಮ ಆಯುರ್ವೇದ ವೈದ್ಯ ಪ್ರಶಸ್ತಿ ಲಭಿಸಿದೆ.ಮೈಸೂರಿನಲ್ಲಿ ಬುಧವಾರ ರಾಷ್ಟ್ರೀಯ ವೈದ್ಯರ ದಿನಾಚರಣೆ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ಜೆ.ಎಸ್.ಎಸ್ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಈ ಪ್ರಶಸ್ತಿ ನೀಡಿ ಗೌರವಿಸಿದೆ.

ಆಯುರ್ವೇದ ವೈದ್ಯಕೀಯ ಕ್ಷೇತ್ರದಲ್ಲಿ ಸಲ್ಲಿಸಿರುವ ಅತ್ಯುತ್ತಮ ಸೇವೆಗಾಗಿ ಈ ಪ್ರಶಸ್ತಿಯನ್ನು ಜೆ.ಎಸ್.ಎಸ್ ಮಹಾವಿದ್ಯಾಪೀಠದ ನಿರ್ದೇಶಕ ಆರ್. ಮಹೇಶ ಪ್ರದಾನ ಮಾಡಿದರು.

ಈ ಸಂದರ್ಭದಲ್ಲಿ ಆಯುರ್ವೇದ ಕಾಲೇಜಿನ ಪ್ರಾಚಾರ್ಯ ಡಾ. ಸರಬೇಶ್ವರ ಕರ್, ಉಪಪ್ರಾಚಾರ್ಯ ಡಾ. ಶಿವಪ್ರಸಾದ ಹುಡೇದ, ಡಾ. ಶ್ರೀಹರಿ ಮುಂತಾದವರು ಉಪಸ್ಥಿತರಿದ್ದರು.

ಡಾ. ಸಂಜಯ ಕಡ್ಲಿಮಟ್ಟಿ ಅವರಿಗೆ ಪ್ರಶಸ್ತಿ ಲಭಿಸಿರುವುದಕ್ಕೆ ಬಿ.ಎಲ್.ಡಿ.ಇ ಸಂಸ್ಥೆಯ ಅಧ್ಯಕ್ಷ ಮತ್ತು ಸಚಿವ ಎಂ. ಬಿ. ಪಾಟೀಲ, ಪ್ರಧಾನ ಕಾರ್ಯದರ್ಶಿ ಮತ್ತು ವಿಧಾನ ಪರಿಷತ ಶಾಸಕ ಸುನೀಲಗೌಡ ಪಾಟೀಲ, ರಜಿಸ್ಟ್ರಾರ್ ಡಾ. ಆರ್. ವಿ. ಕುಲಕರ್ಣಿ, ಕಾಲೇಜಿನ ಪ್ರಾಚಾರ್ಯ ಡಾ. ಅಶೋಕ ಪಾಟೀಲ, ಬೋಧಕ ಹಾಗೂ ಬೋಧಕ ಹೊರತಾದ ಸಿಬ್ಬಂದಿ ಸಂತಸ ವ್ಯಕ್ತಪಡಿಸಿದ್ದು, ಅಭಿನಂದನೆ ಸಲ್ಲಿಸಿದ್ದಾರೆ.

## ಬಿ.ಎಲ್.ಡಿ.ಇ. ಡೀಮ್ಡ್ ವಿವಿ ಸಮಕುಲಾಧಿಪತಿ ಡಾ. ವೈ. ಎಮ್.ಜಯರಾಜ ಅಭಿಮತ

# ಹಳಕಟ್ಟಿ ಅವರ ಸಾಮಾಜಿಕ ಕೊಡುಗೆ ಎಲ್ಲರಿಗೂ ಆದರ್ಶಪ್ರಾಯ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಗರದ ಬಿ.ಎಲ್.ಡಿ.ಇ. ಡೀಮ್ಡ್ ವಿಶ್ವವಿದ್ಯಾಲಯದಲ್ಲಿ ವಚನ ಪಿತಾಮಹ ಶ್ರೀ ಡಾ. ಫ. ಗು. ಹಳಕಟ್ಟಿ ಅವರ ಜನ್ಮದಿನವನ್ನು ಗುರುವಾರ ಶ್ರದ್ಧೆ ಮತ್ತು ಭಕ್ತಿಯಿಂದ ಆಚರಿಸಲಾಯಿತು.

ಈ ಕಾರ್ಯಕ್ರಮದ ಅಂಗವಾಗಿ ಡಾ. ಫ. ಗು. ಹಳಕಟ್ಟಿ ಅವರ ಭಾವಚಿತ್ರಕ್ಕೆ ಗಣ್ಯರು ಪೂಜೆ ಸಲ್ಲಿಸಿ ಪುಷ್ಪ ನಮನ ಅರ್ಪಿಸಿದರು. ಈ ಸಂಧರ್ಭದಲ್ಲಿ ಬಿ.ಎಲ್.ಡಿ.ಇ. ಡೀಮ್ಡ್ ವಿಶ್ವವಿದ್ಯಾಲಯದ ಸಮಕುಲಾಧಿಪತಿ ಡಾ. ವೈ. ಎಮ್. ಜಯರಾಜ ಅವರು ಮಾತನಾಡಿ, ಡಾ. ಫ. ಗು. ಹಳಕಟ್ಟಿ ಅವರು ಬಿ.ಎಲ್.ಡಿ.ಇ ಸಂಸ್ಥೆಯನ್ನು ಸ್ಥಾಪಿಸಿ, ಈ ಭಾಗದ ಜನರಿಗೆ ಶೈಕ್ಷಣಿಕ ಸೌಲಭ್ಯ ಕಲ್ಪಿಸಿದರು. ಅಷ್ಟೇ ಅಲ್ಲ ವಚನ ಸಾಹಿತ್ಯಗಳನ್ನು ಸಂರಕ್ಷಿಸಿ ವಚನಪಿತಾಮಹ ಎಂದು ಖ್ಯಾತರಾಗಿದ್ದಾರೆ. ಬ್ಯಾಂಕಿಂಗ್ ಕ್ಷೇತ್ರದಲ್ಲಿ ತಮ್ಮನ್ನು ತೊಡಗಿಸಿಕೊಂಡು ಸಮಾಜದ ಪ್ರಗತಿಗೆ ಕಾರಣರಾಗಿದ್ದಾರೆ. ಅವರು ನೀಡಿರುವ ಸಾಮಾಜಿಕ ಕೊಡುಗೆ ನಮಗೆಲ್ಲರಿಗೂ ಆದರ್ಶಪ್ರಾಯವಾಗಿದೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಪರೀಕ್ಷೆ ನಿಯಂತ್ರಣಾಧಿಕಾರಿ ಡಾ. ಎಸ್. ಎಸ್. ದೇವರಮನಿ, ಡೀನ್ ಅಲೈಡ್ ಹೆಲ್ತ್ ಸೈನ್ಸಸ್ ಡಾ. ಎಸ್. ವಿ. ಪಾಟೀಲ, ಡಾ. ಎಸ್. ಎಸ್.ಸರ್ ಕಲ್ಯಾಣಶೆಟ್ಟರ, ಹಣಕಾಸು ಅಧಿಕಾರಿ ಬಿ. ಎಸ್. ಪಾಟೀಲ, ಉಪಕುಲಸಚಿವ ಸತೀಶ ಪಾಟೀಲ, ಸಹಾಯಕ ಕುಲಸಚಿವ ಡಾ. ಶ್ರೀಧರ ಬಗಲಿ, ಸಹಾಯಕ ಕಾನೂನು ಅಧಿಕಾರಿ ಐ. ಬಿ. ಮಠಪತಿ ಸೇರಿದಂತೆ ವಿಶ್ವವಿದ್ಯಾಲಯದ ಬೋಧಕ ಹಾಗೂ ಬೋಧಕರ ಹೊರತಾದ ಸಿಬ್ಬಂದಿ ಉಪಸ್ಥಿತರಿದ್ದರು.

# ಫ.ಗು.ಹಳಕಟ್ಟಿ ಜಯಂತಿ & ವಚನ ಸಾಹಿತ್ಯ ಸಂರಕ್ಷಣಾ ದಿನ ಆಚರಣೆ

■ ಉದಯರಶ್ಮಿ ದಿನಪತ್ರಿಕೆ



ದೇವರಹಿಪ್ಪರಗಿ: ತಾಲ್ಲೂಕು ಆಡಳಿತದಿಂದ ವಚನ ಪಿತಾಮಹ ಫ.ಗು.ಹಳಕಟ್ಟಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಜಯಂತಿ ಹಾಗೂ ವಚನ ಸಂರಕ್ಷಣಾ ದಿನ ಆಚ–'ರಿಸಲಾಯಿತು.

ಪಟ್ಟಣದ ತಹಶೀಲ್ದಾರ ಕಾರ್ಯಾಲಯದಲ್ಲಿ ಗುರುವಾರ ಫ.ಗು.ಹಳಕಟ್ಟಿ ಅವರ ಜನ್ಮದಿನವನ್ನು ವಚನ ಸಾಹಿತ್ಯ ಸಂರಕ್ಷಣಾ ದಿನವನ್ನಾಗಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ತಹಶೀಲ್ದಾರ ನಿಂಗಣ್ಣ ಬಿರಾದಾರ ಅಧ್ಯಕ್ಷತೆ ವಹಿಸಿ, ಪೂಜಾ ಕಾರ್ಯಕ್ರಮ ನೆರವೇ–ರಿಸುವುದರ ಮೂಲಕ ಮಾತನಾಡಿ, ಬಸವಾದಿ ಶರಣರ ವಚನಗಳ ಸಂರಕ್ಷಣೆ ಮಾಡಿ, ಬೇರೆ ಬೇರೆ ಭಾಷೆಗಳಿಗೆ ಅನುವಾದಿಸುವುದರ ಮೂಲಕ ಜನಸಾಮಾನ್ಯ–ರಿಗೆ ತಲುಪಿಸುವ ನಿಟ್ಟಿನಲ್ಲಿ ಫ.ಗು.ಹಳಕಟ್ಟಿಯವರ ಕಾರ್ಯ ತುಂಬಾ ಶ್ಲಾಘನೀಯ. ವಚನಗಳ ಮುದ್ರಣ–ಕ್ಕಾಗಿ ತಮ್ಮ ಸ್ವಂತ ಮನೆಯನ್ನೇ ಮಾರಿದ ಹಳಕಟ್ಟಿಯವರ ಸ್ಮರಣೆಗಾಗಿ ವಚನ ಸಂರಕ್ಷಣಾ ದಿನ ಆಚರಿಸುತ್ತಿರುವುದು ಅಭಿನಂದನೀಯ ಸಂಗತಿ ಎಂದರು.

ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಮಾಜಿಅಧ್ಯಕ್ಷ ಜಿ.ಪಿ.ಬಿರಾದಾರ ಮಾತನಾಡಿ, ಪತ್ರಿಕಾ ಸಂಪಾದಕರಾಗಿದ್ದು, 1926 ರಲ್ಲಿ ಬಳ್ಳಾರಿಯಲ್ಲಿ ನಡೆದ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿದ್ದ ಹಳಕಟ್ಟಿಯವರ ಬಾಲ್ಯಜೀವನ, ಅವರ ವಚನ ಸಂಗ್ರಹಕ್ಕೆ ಪ್ರೇರಣೆ, ಪಟ್ಟ ಕಷ್ಟ ಹಾಗೂ ಅಂದಿನ ರಾಜ್ಯಪಾಲರಾಗಿದ್ದ ಜಯಚಾಮರಾಜೇಂದ್ರ ಒಡೆಯರ್ ಅವರು ಹಳಕಟ್ಟಿ ಅವರ ಭೇಟಿಗೆ ಬಂದದನ್ನು ಸ್ಮರಿಸಿ, ಬಂಥನಾಳದ ಸಂಗನಬಸವಶ್ರೀಗಳೊಂದಿಗೆ ಬಿಎಲ್‌ಡಿಇ ಸಂಸ್ಥೆಯನ್ನು ಕಟ್ಟುವಲ್ಲಿ ಮುಖ್ಯ ಪಾತ್ರ ವಹಿಸಿದ್ದರು ಎಂದರು.ಶಿರಸ್ತೇದಾರ ಡಿ.ಎಸ್.ಭೋವಿ, ಮಲ್ಲಿಕಾರ್ಜುನ ಕೋರಿ, ರಾಜು ಕಂಠಿ, ಸಂತೋಷ ತಳವಾರ, ಕುಮಾರ ಅವರಾದಿ, ಚನ್ನಬಸು ಹೊಸಮನಿ, ಆಕಾಶ ಮೇತ್ರಿ, ವೈ.ಜಿ.ಗಂಗಶೆಟ್ಟಿ, ಶಿಲ್ಪಾ ಶಿಲ್ಪಿ ಸೇರಿದಂತೆ ಸಿಬ್ಬಂದಿ ಇದ್ದರು.

# ವೀರನಹೊಸಳ್ಳಿ ವಲಯ ವ್ಯಾಪ್ತಿಯಲ್ಲಿ ಈರ್ವರ ಮೇಲೆ ಕರಡಿ ದಾಳಿ!



■ ಉದಯರಶ್ಮಿ ದಿನಪತ್ರಿಕೆ

ಎಚ್ ಡಿ ಕೋಟೆ: ವೀರನಹೊಸಹಳ್ಳಿ ಅರಣ್ಯ ವಲಯ ವ್ಯಾಪ್ತಿಯಲ್ಲಿ ಕರಡಿಯೊಂದು ಇಬ್ಬರ ಮೇಲೆ ದಾಳಿ ನಡೆಸಿ ಗಾಯಗೊಳಿಸಿರುವ ಘಟನೆ ಗುರುವಾರ ನಡೆದಿದೆ. ಗಾಯಾಳುಗಳನ್ನು ಚಾಕಹಳ್ಳಿ ಗ್ರಾಮದ ನಿವಾಸಿ ನಾರಾಯಣ್ ನಾಯಕ್ (60) ಹಾಗೂ ಚಕ್ಕೋಡನಹಳ್ಳಿ ಗ್ರಾಮದ ಮರಿಗೌಡ (ಶಿವಪ್ಪ) ಎಂದು ಗುರುತಿಸಲಾಗಿದ್ದು, ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಲಾಗಿದೆ. ತಾಲೂಕಿನ ಚಾಕಹಳ್ಳಿ ಗ್ರಾಮದ ಹುಚ್ಚನಾಯಕ ಪುತ್ರ ನಾರಾಯಣ ನಾಯಕ್ ಎಂಬುವವರು, ತಮ್ಮ ಮೊಮ್ಮಗನ ಜೊತೆ ಗುರುವಾರ ಮುಂಜಾನೆ 6.30ರ ಸುಮಾರಿಗೆ ಬಹಿರ್ದೆಸೆಗೆ ತೆರಳುತ್ತಿದ್ದಾಗ, ಮೇಟಿಕುಪ್ಪೆ ಅರಣ್ಯ ವಲಯದಿಂದ ಬಂದ ಕರಡಿ ದಾಳಿ ಮಾಡಿದೆ. ಕೈಗೆ ಕಚ್ಚಿ ಗಾಯಗೊಳಿಸಿದೆ. ತಕ್ಷಣವೇ ಅರಣ್ಯ ಅಧಿಕಾರಿಗಳು ನಾರಾಯಣ ನಾಯಕ್ ಅವರನ್ನು ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಿದ್ದಾರೆ. ಮೊಮ್ಮಗ ಕರಡಿ ದಾಳಿಯಿಂದ ಬಚಾವ್ ಆಗಿದ್ದಾನೆ. ಬಳಿಕ ಹೆಚ್ ಡಿ ಕೋಟೆ ವಲಯ ಅರಣ್ಯಾಧಿಕಾರಿ ರಾಮಾಂಜುನೇಯಲು ನೇತೃತ್ವದಲ್ಲಿ ಅರಣ್ಯ

## ಕರಡಿ ಸೆರೆ: ನಿಟ್ಟುಸಿರು ಬಿಟ್ಟ ಚಾಕಹಳ್ಳಿ, ಚಕ್ಕೋಡನಹಳ್ಳಿ ಗ್ರಾಮಸ್ಥರು

ಸಿಬ್ಬಂದಿ ಮೇಟಿಕುಪ್ಪೆ ಅರಣ್ಯ ವಲಯದಿಂದ ಬೋನ್ ತಂದಿಟ್ಟು, ಕೂಬಿಂಗ್ ಶುರು ಮಾಡಿದ್ದಾರೆ.

ಅಲ್ಲಿಂದ ತಪ್ಪಿಸಿಕೊಂಡು ಬಂದ ಕರಡಿ, ಮಧ್ಯಾಹ್ನ ಚಕ್ಕೋಡನಹಳ್ಳಿಯಲ್ಲಿ ದಾಳಿ ನಡೆಸಿದೆ. ಗ್ರಾಮದ ತಿಮ್ಮೇಗೌಡ ಪುತ್ರ ಮರಿಗೌಡ( ಶಿವಪ್ಪ) ಎಂಬುವವರು ವೀರನಹೊಸಹಳ್ಳಿ ವ್ಯಾಪ್ತಿಯ ವಲಯದ ಪೊದೆಯೊಂದರಲ್ಲಿ ಮೇಕೆಗಳಿಗೆ ಸೊಪ್ಪು ಕೀಳುತ್ತಿದ್ದಾಗ ಕರಡಿ ಏಕಾಏಕಿ ದಾಳಿ ಮಾಡಿದೆ. ಕುತ್ತಿಗೆ, ಹೊಟ್ಟೆ ಪಕ್ಕೆಲುಗೆ ಕಚ್ಚಿ,ಪರಚಿ ಗಂಭೀರ ಗಾಯಗೊಳಿಸಿದೆ. ಅರಣ್ಯ ಸಿಬ್ಬಂದಿ ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಚಿಕಿತ್ಸೆ ಕೊಡಿಸಿದ್ದಾರೆ. ತಕ್ಷಣವೇ ಕಾರ್ಯಪ್ರವೃತ್ತರಾದ ಅರಣ್ಯ ಇಲಾಖೆ ಅಧಿಕಾರಿಗಳು ಕರಡಿಯನ್ನು ಸೆರೆಹಿಡಿದು, ಅರಣ್ಯಗೆ ಬಿಟ್ಟಿದ್ದಾರೆ.

ಕೂಬಿಂಗ್ ವೇಳೆ ಅರಣ್ಯ ಅಧಿಕಾರಿಗಳಾದ ರಾಮಾಂಜುನೇಯಲು, ವಿನೋದ್ ಗೌಡ, ರಶ್ಮಿ ಸೇರಿದ್ನಾತೆ ಅರಣ್ಯ ಸಿಬ್ಬಂದಿ ಇದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR